09 ಅಕ್ಟೋಬರ್ 2025 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 209 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629

ಜನಮನದ ದನಿ

# ಪ್ರಜೋದಯ


ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಭಾರತ ಏಕದಿನ ಕ್ರಿಕೆಟ್ ತಂಡವು ಅ.15ರಂದು 2 ಪ್ರತ್ಯೇಕ ಗುಂಪುಗಳಲ್ಲಿ ಆಸ್ಟ್ರೇಲಿಯಾಕ್ಕೆ ಪ್ರಯಾಣಿಸಲಿದೆ. ಪ್ರವಾಸದಲ್ಲಿ 3 ಏಕದಿನ ಹಾಗೂ 5 ಟಿ-20 ಪಂದ್ಯಗಳಲ್ಲಿ ಆಡಲಿದೆ.


ಸಮಸ್ತ ಭಕ್ತರ ಇಷ್ಟಾರ್ಥ ಈಡೇರಿಸುವ ಹಾಸನಾಂಬ » 2


ನವಿ ಮುಂಬೈ ವಿಮಾನ ನಿಲ್ದಾಣ ಉದ್ಘಾಟಿಸಿದ ಪ್ರಧಾನಿ ಮೋದಿ » 3


ಸರ್ಕಾರಿ ನೌಕರರ ಸರ್ವ ಸದಸ್ಯರ ವಾರ್ಷಿಕ ಸಭೆ » 4

# ಇಂದಿನಿಂದ ಹಾಸನಾಂಬ ದೇವಿ ದರ್ಶನ

**ಅ.23ರ ವರೆಗೆ ದರ್ಶನೋತ್ಸವ | ಅತಿ ಗಣ್ಯರಿಗೆ ಶಿಷ್ಟಾಚಾರದ ಪ್ರಕಾರ ದೇವಿ ದರ್ಶನಕ್ಕೆ ವ್ಯವಸ್ಥೆ | ಭಕ್ತರ ಅನುಕೂಲಕ್ಕಾಗಿ ಮೂಲ ಸೌಕರ್ಯಕ್ಕೆ ಆದ್ಯತೆ**

• ಪ್ರಜೋದಯ ವರದಿ

**ಹಾಸನ:** ಶಕ್ತಿದೇವತೆ ಹಾಸನಾಂಬ ದರ್ಶನೋತ್ಸವಕ್ಕೆ ಕ್ಷಣಗಣನೆ ಶುರುವಾಗಿದ್ದು, ಅ.9ರ ಗುರುವಾರ ಮಧ್ಯಾಹ್ನ 12.30ಕ್ಕೆ ಸಲ್ಲುವ ಶುಭ ಮುಹೂರ್ತದಲ್ಲಿ ಗರ್ಭಗುಡಿ ಬಾಗಿಲು ತೆರೆಯಲಿದೆ.

ಅ.23ರ ವರೆಗೆ ಜಾತ್ರೆ ನೆರವೇರಲಿದ್ದು, ಮೊದಲ ಮತ್ತು ಕೊನೆಯ ದಿನ ಸಾರ್ವಜನಿಕ ದರ್ಶನಕ್ಕೆ ಅವಕಾಶ ಇರುವುದಿಲ್ಲ. ತಳವಾರ ವಂಶಸ್ಥ ನರಸಿಂಹರಾಜ್ ಅವರು ಗರ್ಭಗುಡಿ ಎದುರಿಗೆ ಪ್ರತಿಷ್ಠಾಪಿಸುವ ಬಾಳೆಕಂದು ಕತ್ತರಿಸಿದ ಬಳಿಕ ಗರ್ಭಗುಡಿ ಬಾಗಿಲನ್ನು ಜಿಲ್ಲಾಡಳಿತದ ಅಧಿಕಾರಿಗಳು ಹಾಗು ಜನಪ್ರತಿನಿಧಿಗಳ ಸಮ್ಮುಖದಲ್ಲಿ ತೆಗೆಯಲಾಗುತ್ತದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ, ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಕೆ.ಎಂ. ಶಿವಲಿಂಗೇಗೌಡ, ಹೆಚ್.ಪಿ.ಸ್ವರೂಪ್ ಸೇರಿ ಹಲವು ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಮೊದಲ ದಿನ ಸಾರ್ವಜನಿಕ ದರ್ಶನ ಇರುವುದಿಲ್ಲ. ಧರ್ಮದರ್ಶನದಲ್ಲಿ ದೇವಿಗೆ ನೈವೇದ್ಯ, ಮಹಾ ಮಂಗಳಾರತಿ ಸಮಯ ಹೊರತುಪಡಿಸಿ ದಿನಕ್ಕೆ 16 ರಿಂದ 20 ಗಂಟೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುತ್ತದೆ. ಅರ್ಥಪೂರ್ಣ ಜಾತ್ರಾ ಮಹೋತ್ಸವಕ್ಕಾಗಿ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಂಡಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿದೆ.

ಹಾಸನಾಂಬ ಜಾತ್ರಾ ಮಹೋತ್ಸವ ಕುರಿತು ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು, ಪ್ರತಿ ವರ್ಷದಂತೆ ಈ ಬಾರಿಯೂ 1,000 ರೂ., 300 ರೂ. ಟಿಕೆಟ್ ವ್ಯವಸ್ಥೆ ಇದೆ. ಈ ಮಾದರಿಯ ಟಿಕೆಟ್ ಪಡೆದವರು ಸುಲಭ ಹಾಗು ಶೀಘ್ರ ದರ್ಶನ ಪಡೆಯಬಹುದು. ಹಾಗೆಯೇ ಶಿಷ್ಟಾಚಾರ ದರ್ಶನ ಇರಲಿದೆ. ಗಣ್ಯರಿಗೆ ಗೋಲ್ಡ್ ಪಾಸ್ ವಿತರಿಸಲಿದ್ದು, ಅವರು ಮಹಾನಗರ ಪಾಲಿಕೆ ಎದುರಿನ ಗೇಟ್‌ನಿಂದ ಬರಬೇಕು. ಬೆಳಿಗ್ಗೆ 7 ರಿಂದ 10 ಗಂಟೆವರೆಗೆ ಮಾತ್ರ ಗಣ್ಯರನ್ನು ಬಿಡಲಾಗುವುದು. ಬೆಳಿಗ್ಗೆ 10.30 ರಿಂದ 12.30ರ ವರೆಗೆ ಅತಿ ಗಣ್ಯರಿಗೆ ಶಿಷ್ಟಾಚಾರದ ಪ್ರಕಾರ ದೇವಿ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮಾಜಿ ಪ್ರಧಾನಿ, ಸುಪ್ರೀಂ ಕೋರ್ಟ್ ನ್ಯಾಯಾಧೀಶರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗು ಪ್ರಮುಖ ಮಠಾಧೀಶರು ಈ ಸೌಲಭ್ಯ ಪಡೆಯಬಹುದು. ಆದರೆ, ಒಬ್ಬರ ಜೊತೆ ನಾಲ್ವರಿಗೆ ಮಾತ್ರ ಪ್ರವೇಶವಿದ್ದು, ಎಲ್ಲರೂ ಸಹಕಾರ ನೀಡಬೇಕು. ಜಿಲ್ಲಾಡಳಿತದಿಂದ 10 ವಾಹನಗಳ ನಿಯೋಜನೆ ಮಾಡಿದ್ದು ಪ್ರವಾಸಿ ಮಂದಿರದಿಂದ ಕರೆದೊಯ್ಯಲಾಗುವುದು. ಶಾಸಕರು, ಸಿನಿಮಾ ನಟರು ಸೇರಿ ಎಲ್ಲಾ ಗಣ್ಯರು ಜಿಲ್ಲಾಡಳಿತದ ನಿಯಮಗಳನ್ನು ಪಾಲಿಸುವ ಮೂಲಕ ಮಹೋತ್ಸವ ಯಶಸ್ಸಿಗೆ ಸಹಕರಿಸಬೇಕು. ಸಾಮಾನ್ಯ ಭಕ್ತರಿಗೆ ಅನುಕೂಲವಾಗುವ ಉದ್ದೇಶದಿಂದ ಅ.21 ಹಾಗು 22ರಂದು ವಿಶೇಷ ಪಾಸ್‌ಗಳಿಗೆ ಅನುಮತಿ ಇರುವುದಿಲ್ಲವೆಂದು ಸ್ಪಷ್ಟಪಡಿಸಿದರು.



> ಗಣ್ಯರು, ಅತಿ ಗಣ್ಯರು ಬಂದಾಗ ಧರ್ಮ ದರ್ಶನ ಸಾಲಿನಲ್ಲಿ ಬರುವ ಭಕ್ತರಿಗೆ ತೊಂದರೆಯಾಗಬಾರದೆಂಬ ಕಾರಣಕ್ಕೆ ವಿಶೇಷ ವ್ಯಕ್ತಿಗಳಿಗೆ ಸಮಯ ನಿಗದಿಪಡಿಸಲಾಗಿದೆ. ಸರ್ವರ ಹಿತಕ್ಕಾಗಿ ರೂಪಿಸಿರುವ ನಿಯಮಗಳನ್ನು ಎಲ್ಲರೂ ಪಾಲಿಸುವ ಮೂಲಕ ಮಹೋತ್ಸವ ಯಶಸ್ಸಿಗೆ ಸಹಕರಿಸಬೇಕು.
> -ಕೆ.ಎಸ್. ಲತಾಕುಮಾರಿ, ಜಿಲ್ಲಾಧಿಕಾರಿ



**ಮೂಲ ಸೌಕರ್ಯಕ್ಕೆ ಆದ್ಯತೆ**

ಈ ಬಾರಿ ಹಾಸನಾಂಬ ದರ್ಶನಕ್ಕೆ 25 ಲಕ್ಷ ಜನರು ಭೇಟಿ ನೀಡುವ ನಿರೀಕ್ಷೆ ಇದೆ. 120 ತಾತ್ಕಾಲಿಕ ಶೌಚಾಲಯ ಸ್ಥಾಪಿಸಲಾಗಿದ್ದು, ಪ್ರತಿ ಎರಡು ಶೌಚಾಲಯಕ್ಕೆ ಒಬ್ಬ ಸಿಬ್ಬಂದಿ ಇರುತ್ತಾರೆ. ಭಕ್ತರಿಗೆ ಕುಡಿಯುವ ನೀರು, ಮಜ್ಜಿಗೆ ನೀಡಲಾಗುವುದು. ತುರ್ತು ಸ್ಪಂದನೆಗಾಗಿ ಸಹಾಯವಾಣಿ ತೆರೆಯಲಾಗಿದೆ. ಜೊತೆಗೆ ಆರೋಗ್ಯ, ಅಗ್ನಿಶಾಮಕ ವಾಹನ ಇರಲಿದೆ. ಕಳೆದ ವರ್ಷ ದರ್ಶನ ಪಡೆದು ಬಂದವರು ಪಾದರಕ್ಷೆಗಳಿಗಾಗಿ ಪುನಃ ಬಂದಿದ್ದರಿಂದ ಗೊಂದಲವುಂಟಾಗಿತ್ತು. ಆದ್ದರಿಂದ ಈ ಬಾರಿ ಪಾದರಕ್ಷೆಯನ್ನು ರೈಲ್ವೆ, ಬಸ್ ನಿಲ್ದಾಣಗಳಲ್ಲೇ ಬಿಡಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

**ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ**

ಗುರುವಾರ ಸಂಜೆ 6 ಗಂಟೆಗೆ ಹೇಮಾವತಿ ಪ್ರತಿಮೆ ಬಳಿ ಜಾನಪದ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಲಾಗುವುದು. ಅ. 10 ರಿಂದ 21ರ ವರೆಗೆ ಸುಭಾಷ್ ಚೌಕದ ಬಳಿ ಸಂಜೆ 6.30 ರಿಂದ 9.30ರ ವರೆಗೆ ಜಾನಪದ ನೃತ್ಯೋತ್ಸವ, ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಲ್ಲಿ ವಿಶೇಷ ಫಲಪುಷ್ಪ ಪ್ರದರ್ಶನ ಇರಲಿದೆ. ಸಂಜೆ 7 ರಿಂದ 9ರ ವರೆಗೆ ಪ್ರತಿದಿನ ವಿವಿಧ ಕಾಲೇಜು ವಿದ್ಯಾರ್ಥಿಗಳಿಂದ ನೃತ್ಯೋತ್ಸವ ನೆರವೇರಲಿದೆ. ಅ.10 ರಿಂದ 20ರ ವರೆಗೆ ಹಾಸನಾಂಬ ದೇವಾಲಯ ಆವರಣದಲ್ಲಿ ಸರದಿ ಸಾಲಿಗೆ ಹೊಂದಿಕೊಂಡತೆ ಭಜನೆ, ಲೈವ್ ಮ್ಯೂಸಿಕ್ ಇರಲಿದೆ ಎಂದು ಮಾಹಿತಿ ನೀಡಿದರು.

**ವಸ್ತು ಪ್ರದರ್ಶನ ವಿಶೇಷತೆ**

ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಅ.9 ರಿಂದ 23ರ ವರೆಗೆ ವಿಶೇಷ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಬೆಳಿಗ್ಗೆ 9 ರಿಂದ ರಾತ್ರಿ 8.30ರ ತನಕ ಸಾರ್ವಜನಿಕರ ಪ್ರವೇಶ ಇರಲಿದೆ. ಅ.19 ರಂದು ಬೆಳಿಗ್ಗೆ 11 ರಿಂದ ಸಂಜೆ 4ರ ವರೆಗೆ ಡಾಗ್ ಶೋ, ಅ.12ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2ರವರೆಗೆ ಪಾಕ ಸ್ಪರ್ಧೆ ಏರ್ಪಡಿಸಲಾಗಿದೆ ಎಂದರು.

» ನಾಲ್ಕನೇ ಪುಟದಲ್ಲಿ

## ವನ್ಯಜೀವಿ ಹಂತಕರ ವಿರುದ್ಧ ಕಠಿಣ ಕ್ರಮ: ಸಿದ್ದರಾಮಯ್ಯ

• ಪ್ರಜೋದಯ ವರದಿ

**ಬೆಂಗಳೂರು :** ಪ್ರಾಣಿ ಸಂಪತ್ತು ಇಲ್ಲದೆ ಅರಣ್ಯ ಸಂಪತ್ತಿಗೆ ಮೌಲ್ಯವೇ ಇಲ್ಲ. ಹೀಗಾಗಿ ಪ್ರಾಣಿ ಸಂಪತ್ತನ್ನು ಕೊಲ್ಲುವವರ ವಿರುದ್ಧ ಕಠಿಣ ಕ್ರಮ ಶತಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಎಚ್ಚರಿಕೆ ನೀಡಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ 71ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪರಿಸರ, ಅರಣ್ಯ ಸಂರಕ್ಷಕರಿಗೆ ಮುಖ್ಯಮಂತ್ರಿ ಪದಕ ವಿತರಿಸಿ ಮಾತನಾಡಿದ ಅವರು, ಸಾಕು ಹಸುವನ್ನು ತಿಂದಿದೆ ಎನ್ನುವ ಕಾರಣಕ್ಕೆ ಹುಲಿಗಳಿಗೆ ವಿಷ ಹಾಕುವುದನ್ನು ಸಹಿಸಲು ಸಾಧ್ಯವಿಲ್ಲ. ಯಾರೇ ಅರಣ್ಯ ಮತ್ತು ಪ್ರಾಣಿ ಸಂಪತ್ತನ್ನು ಕೊಲ್ಲಲು ಮುಂದಾದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಅವರು ಎಷ್ಟೇ ದೊಡ್ಡವರಾಗಿದ್ದರೂ ಮುಲಾಜು ನೋಡದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಅರಣ್ಯ ಪರಿಸರ ಆರೋಗ್ಯಕರವಾಗಿ ವಿಸ್ತರಣೆ ಆದಷ್ಟೂ ಮನುಷ್ಯ ಪರಿಸರ ಹೆಚ್ಚು ಆರೋಗ್ಯಕರವಾಗಿರುತ್ತದೆ. ಅರಣ್ಯದ ಉಳಿವು ಭೂಮಿಯ ಉಳಿವು ಎನ್ನುವುದನ್ನು ಮರೆಯಬಾರದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

## ವಾಯುಭಾರ ಕುಸಿತ: ಮತ್ತೆ ಮಳೆ



• ಪ್ರಜೋದಯ ವರದಿ

**ಹಾಸನ:** ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತವಾದ ಹಿನ್ನಲೆ ಮಲೆನಾಡು ಭಾಗದಲ್ಲಿ ಬುಧವಾರದಿಂದ ಮತ್ತೆ ಮಳೆ ಆರಂಭವಾಗಿದೆ.

ಸಕಲೇಶಪುರ ಪಟ್ಟಣ ಹಾಗು ತಾಲ್ಲೂಕಿನ ವಿವಿಧೆಡೆ ಮಧ್ಯಾಹ್ನ 3 ಗಂಟೆ ಸುಮಾರಿಗೆ ಆರಂಭವಾದ ಮಳೆ ಸಂಜೆವರೆಗೂ ಸುರಿಯಿತು. ಪಟ್ಟಣದಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ಧಾರಾಕಾರವಾಗಿ ಮಳೆ ಸುರಿದಿದ್ದರಿಂದ ಜನಜೀವನ ಅಸ್ತವ್ಯಸ್ತಗೊಂಡಿತು. ಆಲೂರು ತಾಲ್ಲೂಕು ಭಾಗದಲ್ಲಿ ತುಂತುರು ಮಳೆಯಾಗಿದೆ. ನಗರದ ಕೆಲ ಭಾಗದಲ್ಲಿ ಬಿಸಿಲು ಮಳೆಯಾದರೆ, ಕೆಲವು ಕಡೆಗಳಲ್ಲಿ ತುಂತುರು ಮಳೆ ಸುರಿಯಿತು. ಜಿಲ್ಲೆಯ ವಿವಿಧೆಡೆ ಸಂಜೆಯಿಂದಲೇ ಮೋಡ ಕವಿದ ವಾತಾವರಣವಿದ್ದು, ರಾತ್ರಿ ವೇಳೆಗೆ ಮಳೆಯಾಗುವ ಸಾಧ್ಯತೆ ಇದೆ.

ವಾಯುಭಾರ ಕುಸಿತದ ಪರಿಣಾಮ ಜಿಲ್ಲೆ ಸೇರಿ ರಾಜ್ಯಾದ್ಯಂತ ಮೂರು ದಿನಗಳ ಕಾಲ ಗುಡುಗು ಸಹಿತ ಮಳೆಯಾಗಲಿದೆ. ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಜೋರು ಮಳೆಯಾಗಲಿದೆ ಎಂದು ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ತಂಬಾಕು ಮಾರುಕಟ್ಟೆಯಲ್ಲಿ ದಲ್ಲಾಳಿ ಹಾವಳಿ ತಪ್ಪಿಸಿ

• ಪ್ರಜೋದಯ ವರದಿ

**ಅರಕಲಗೂಡು:** ತಂಬಾಕು ಮಾರುಕಟ್ಟೆ ಯಲ್ಲಿ ದಲ್ಲಾಳಿಗಳ ಹಾವಳಿ ಹೆಚ್ಚಿದೆ ಎಂಬ ಆರೋಪ ಕೇಳಿ ಬರುತ್ತಿದ್ದು, ಅದಕ್ಕೆ ಅವಕಾಶ ಮಾಡಿ ಕೊಡಬಾರದೆಂದು ಸಂಸದ ಶ್ರೇಯಸ್ ಪಟೇಲ್ ಅವರು ತಂಬಾಕು ಮಂಡಳಿ ಸ್ಥಳೀಯ ಅಧೀಕ್ಷಕರಿಗೆ ಸೂಚನೆ ನೀಡಿದರು.

ತಾಲ್ಲೂಕಿನ ರಾಮನಾಥಪುರದ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ದಹಿಸಿ ಗ್ರೇಡ್ ಮಾಡಿದ ತಂಬಾಕು ಮಾರಾಟ ಪ್ರಕ್ರಿಯೆ ಪ್ರಾರಂಭೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರೈತ ಸಂಘದ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಪರಿಹಾರ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಇಂದಿನಿಂದ ತಂಬಾಕು ಹರಾಜು ಪ್ರಕ್ರಿಯೆ ಆರಂಭವಾಗಿದೆ. ನಮ್ಮ ರೈತರು ವರುಣನ ಅವಕೃಪೆ, ಹಲವು ರೋಗ-ರುಜಿನಗಳ ಬಾಧೆ ನಡುವೆಯೂ ಕಷ್ಟಪಟ್ಟು ತಂಬಾಕು ಬೆಳೆದು ಅದನ್ನು ಅಣಿಗೊಳಿಸಿ ಮಾರಾಟಕ್ಕೆ ತಂದಿದ್ದಾರೆ. ಅನ್ನದಾತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಒಳ್ಳೆಯ ಬೆಲೆ ಕಲ್ಪಿಸುವ ಮೂಲಕ ಬೆಳೆಗಾರರಿಗೆ ನೆರವಾಗಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.



ಮಾರುಕಟ್ಟೆಗೆ ಬರುವ ರೈತರಿಗೆ ಮೂಲಭೂತ ಸೌಕರ್ಯ ಕಲ್ಪಿಸಬೇಕು. ವಿಶ್ರಾಂತಿ ಕೊಠಡಿ, ಗುಣಮಟ್ಟದ ಆಹಾರ, ಕುಡಿಯುವ ನೀರು ಹಾಗು ಶೌಚಾಲಯ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಒದಗಿಸಿಕೊಡಲು ಮುತುವರ್ಜಿ ವಹಿಸಬೇಕು. ಇದೇ ವೇಳೆ ಆರೋಗ್ಯಯುತ ಆಹಾರ ತಯಾರಿಸುವ ಹೋಟೆಲ್‌ಗಳಿಗೆ ಮಾತ್ರ ತಂಬಾಕು ಮಂಡಳಿಯ ಎದುರು ಹೋಟೆಲ್ ತೆರೆಯುವಂತೆ ನಿರ್ದೇಶನ ನೀಡಿದರು. ಮುಖಂಡ ಶ್ರೀಧರ್‌ಗೌಡ ಮುಂತಾದವರಿದ್ದರು.

## ರೈತರಿಗೆ ಮಂಜೂರಾದ ಭೂಮಿ ಏಕಾಏಕಿ ರದ್ದು: ಬಿ. ಶಿವರಾಮ್ ಆರೋಪ

**ಬ್ಯಾಂಕ್‌ಗಳಲ್ಲಿ ಸಾಲ ಪಡೆದ ರೈತರ ಗತಿ ಏನು | ಸಾವಿರಾರು ಕುಟುಂಬಗಳಿಗೆ ತೊಂದರೆ**

• ಪ್ರಜೋದಯ ವರದಿ

**ಹಾಸನ:** ಮೀಸಲು ಅರಣ್ಯದ ಹೆಸರಿನಲ್ಲಿ ಬೇಲೂರು ತಾಲ್ಲೂಕು ಐದಳ್ಳ ಕಾವಲು, ಅರಸೀಕೆರೆಯ ನಾಯಕನ ಕೆರೆ ಕಾವಲು, ಅರಸೀಕೆರೆಯ ಚಿಕ್ಕಲಿಂಗನಹಳ್ಳಿ ವ್ಯಾಪ್ತಿಯಲ್ಲಿ ರೈತರಿಗೆ ಮಂಜೂರಾಗಿರುವ 10 ಸಾವಿರ ಎಕರೆ ಭೂಮಿಯ ಪಹಣಿಯನ್ನು ಇಂಡೀಕರಣ (ಮ್ಯೂಟೇಷನ್) ಮಾಡಿಸಿ ಮಂಜೂರಾತಿ ರದ್ದುಪಡಿಸಿರುವುದು ಯಾವ ನ್ಯಾಯವೆಂದು ಮಾಜಿ ಸಚಿವ ಬಿ. ಶಿವರಾಮ್ ಅವರು ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, 1898ರಲ್ಲಿ ಐದಳ್ಳ ಅಮೃತ್ ಮಹಲ್ ಕಾವಲು ರಕ್ಷಿತ ಅರಣ್ಯವೆಂದು ಘೋಷಿಸಿ ಅಧಿಸೂಚನೆ ಹೊರಡಿಸಲಾಗಿದೆ. 2024-25ನೇ ಸಾಲಿನಲ್ಲಿ ಅರಣ್ಯ ಪ್ರದೇಶದ ಜಂಟಿ ಮೋಜಿಣಿ ನಡೆಸಿ ನಕಾಶೆ ಸಿದ್ಧಪಡಿಸಿದ್ದು, ಒಟ್ಟು 10 ಸಾವಿರ ಎಕರೆಯಲ್ಲಿ 3300 ಎಕರೆ ಕಂದಾಯ ದಾಖಲಾತಿಗಳಲ್ಲಿ ಅರಣ್ಯವೆಂದು ದಾಖಲಾಗಿದೆ. ಆದರೆ, ಮೈಸೂರು ಮಹಾರಾಜರ ಅವಧಿಯಲ್ಲಿ ಈ ಭೂಮಿಯನ್ನು ಸಾಗುವಳಿಗಾಗಿ ರೈತರಿಗೆ ನೀಡಲಾಗಿದೆ. ರೈತರ ಬಳಿ ಈ ಕುರಿತು ಪಹಣಿಗಳಿವೆ. ಈಗ ಏಕಾಏಕಿ ಪಹಣಿ ರದ್ದುಗೊಳಿಸಿ ಅರಣ್ಯ ಇಲಾಖೆ ಎಂದು ನಮೂದಿಸಿರುವುದು ಯಾವ ಉದ್ದೇಶಕ್ಕೆ ಎಂಬುದನ್ನು ಅಧಿಕಾರಿಗಳು ಹೇಳಬೇಕು. ಅದೇ ಜಮೀನಿನ ಮೇಲೆ ರೈತರು ಬ್ಯಾಂಕ್‌ಗಳಲ್ಲಿ ಸಾಲ ಪಡೆದಿದ್ದಾರೆ. ಸರ್ಕಾರದ ವಿವಿಧ ನಿಗಮದಡಿ ಬಾವಿ ಕೊರೆಸಿದ್ದಾರೆ, ಕೃಷಿ ಚಟುವಟಿಕೆಗಾಗಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿದ್ದಾರೆ. ಸರ್ಕಾರವೇ ಸಾಲ ಸೌಲಭ್ಯ ನೀಡಿ ಕೃಷಿಗೆ ಉತ್ತೇಜನ ನೀಡಿ ಈಗ ಅರಣ್ಯ ಭೂಮಿ ಎಂದು ಹೇಳುತ್ತಿರುವುದು ಗೊಂದಲ ಸೃಷ್ಟಿಸಿದೆ. ಬೇಲೂರು ತಾಲ್ಲೂಕು ಒಂದರಲ್ಲೇ 10 ಸಾವಿರಕ್ಕೂ ಅಧಿಕ ಎಕರೆ ಈ ರೀತಿ ಆಗಿದೆ. ಇನ್ನು ಜಿಲ್ಲಾದ್ಯಂತ 50 ಸಾವಿರ ಎಕರೆ ಈ ರೀತಿ ಸಮಸ್ಯೆಗೆ ಸಿಲುಕಿದ್ದು, ಪರಿಹಾರ ಕಲ್ಪಿಸಬೇಕಲ್ಲವೇ ಎಂದು ಕೇಳಿದರು.



2025ರ ಮೇ 13 ರಂದು ಬೇಲೂರು ವಲಯದ ಬಿಕ್ಕೋಡು ಗ್ರಾಮಕ್ಕೆ ಜಿಲ್ಲಾ ಆನೆ ಕಾರ್ಯಪಡೆ ಕಟ್ಟಡದ ನಿರ್ಮಾಣ ಕಾಮಗಾರಿಗೆ ಶಿಲಾನ್ಯಾಸ ಕಾರ್ಯಕ್ರಮಕ್ಕೆ ಆಗಮಿಸಿದ್ದ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಐದಳ್ಳ ಕಾವಲ್ ಬಳಿ ನಿಂತು ಅನಧಿಕೃತ ಮಂಜೂರಾತಿಯನ್ನು ರದ್ದುಪಡಿಸುವ ಬಗ್ಗೆ ಮಾಹಿತಿ ಪಡೆದು ಅರಣ್ಯ ಪ್ರದೇಶವನ್ನು ಕೂಡಲೇ ಪಹಣಿಯಲ್ಲಿ ಅರಣ್ಯ ಎಂದು ಇಂಡೀಕರಣ ಮಾಡಲು ಹಾಗು ಕಾಲಮಿತಿಯೊಳಗೆ ಅನಧಿಕೃತ ಮಂಜೂರಾತಿಯ ಎಲ್ಲಾ ಪ್ರಕರಣಗಳನ್ನು ರದ್ದು ಮಾಡಲು ನ್ಯಾಯಾಲಯಕ್ಕೆ ಅಪೀಲು ಸಲ್ಲಿಸಲು ಅಧಿಕಾರಿಗಳಿಗೆ ಹೇಳಿದ್ದಾರೆ. ಯಾವುದೇ ಸಭೆ ಮಾಡದೆ, ಹಿಂದಿನ ದಾಖಲಾತಿಗಳನ್ನು ಪರಿಶೀಲಿಸದೆ, ಸಂತ್ರಸ್ತರ ನೋವು ಆಲಿಸದೆ ಏಕಾಏಕಿ ದಿಢೀರ್ ಘೋಷಣೆ ಮಾಡುವುದು ಸರಿಯಾದ ಮಾರ್ಗವಲ್ಲವೆಂದರು.

**ಸುಪ್ರೀಂ ಕೋರ್ಟ್ ಆದೇಶ ಪಾಲಿಸಿ**

ಭೂ ದಾಖಲೆ ವಿಚಾರವಾಗಿ ಕಂದಾಯ ಹಾಗು ಅರಣ್ಯ ಇಲಾಖೆ ನಡುವಿನ ಗೊಂದಲ ಪರಿಹರಿಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಆದೇಶಿಸಿದೆ. ಕಂದಾಯ ಭೂಮಿಯ ದಾಖಲಾತಿಗಳು ನಿಖರವಾಗಿದ್ದರೆ ಅಲ್ಲಿ ಅರಣ್ಯ ಇಲಾಖೆ ಹಸ್ತಕ್ಷೇಪ

» ನಾಲ್ಕನೇ ಪುಟದಲ್ಲಿ

## ಜೆಡಿಎಸ್ ಪ್ರತಿಭಟನೆಯಲ್ಲಿ ಬಿಜೆಪಿ ಬಾವುಟ: ಆಕ್ರೋಶ

• ಪ್ರಜೋದಯ ವರದಿ

**ಅರಸೀಕೆರೆ:** ನಗರದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜೆಡಿಎಸ್ ಪ್ರತಿಭಟನೆಯಲ್ಲಿ ಬಿಜೆಪಿ ಬಾವುಟ ಬಳಸಿರುವುದು ಖಂಡನೀಯವೆಂದು ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಯತೀಶ್ ಕುಮಾರ್ ಅವರು ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆಡಿಎಸ್ ಮುಖಂಡ ಸಂತೋಷ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ಬಾವುಟ ಮತ್ತು ಟೋಪಿ ಬಳಕೆ ಮಾಡಲಾಗಿದೆ. ಅದರ ಬಗ್ಗೆ ನಮಗೆ ಮಾಹಿತಿ ಅಥವಾ ಆಹ್ವಾನವಿರಲಿಲ್ಲ. ಸಂತೋಷ್ ಅವರ ಜೊತೆ ಓಡಾಡುವವರು ನಮ್ಮ ಪಕ್ಷದವರಲ್ಲ. ಪಕ್ಷದಲ್ಲಿದ್ದಾಗ ಬಿಜೆಪಿ ಬಾವುಟ ಸುಟ್ಟಿದ್ದವರು, ಈಗ ಅದನ್ನು ಉಪಯೋಗಿಸಿ ಪಕ್ಷಕ್ಕೆ ಕಳಂಕ ತಂದಿದ್ದಾರೆಂದರು.

ಬಿಜೆಪಿ ನಗರ ಮಂಡಲ ಅಧ್ಯಕ್ಷ ಅವಿನಾಶ್ ನಾಯ್ಡು ಅವರು ಮಾತನಾಡಿ, ಎನ್.ಆರ್. ಸಂತೋಷ್ ಅವರ ಜೊತೆ ತಿರುಗಾಡುವ ಗಿರೀಶ್, ಶಿವನ್ ರಾಜ್ ಮುಂತಾದವರಿಗೆ ಈಗಾಗಲೇ ನೋಟೀಸ್ ನೀಡಲಾಗಿದೆ. ಮುಂದೆ ಯಾರೇ ಅವರ ಜೊತೆ ಭಾಗವಹಿಸಿದರೂ ಪಕ್ಷ ವಿರೋಧಿ ಕ್ರಮ ಕೈಗೊಳ್ಳಲಾಗುತ್ತದೆ. ಜೆಡಿಎಸ್ ಅವರಿಗೆ ತಮ್ಮ ಬೆಂಬಲ ಸಾಕಾಗದೆ ಬಿಜೆಪಿಯನ್ನು ಅಸ್ತ್ರವಾಗಿ ಬಳಸಿಕೊಳ್ಳುತ್ತಿದ್ದಾರೆಂದರು.

ದುಮ್ಮೇನಹಳ್ಳಿ ಗಂಗಾಧರ್ ಅವರು ಮಾತನಾಡಿ, ನಮ್ಮ ಪಕ್ಷದ ಚಿಹ್ನೆಯನ್ನು ಅನುಮತಿ ಇಲ್ಲದೇ ಬಳಸುವುದು ಶೋಭೆ ತರುವುದಿಲ್ಲ. ಯಾವುದೇ ಪ್ರತಿಭಟನೆಯಲ್ಲಿ ಬೆಂಬಲ ಬೇಕಾದರೆ ನಗರ ಮತ್ತು ಗ್ರಾಮೀಣ ಘಟಕಗಳ ಪದಾಧಿಕಾರಿಗಳ ಸಂಪರ್ಕಿಸಬೇಕು. ಸಂಘಟನೆ ಎಂದರೆ ಶಿಸ್ತಿನ ಸಂಕೇತ. ನಮ್ಮ ಪಕ್ಷದ ಚಿಹ್ನೆಯನ್ನು ಸ್ವಂತ ಪ್ರಯೋಜನಕ್ಕಾಗಿ ಬಳಸುವುದು ಖಂಡನೀಯ ಎಂದರು. ಬಿಜೆಪಿ ಪ್ರಧಾನ ಕಾರ್ಯದರ್ಶಿ ರಾಂಪುರ ಸುನಿಲ್ ಶಾಸ್ತ್ರಿ, ಮಂಜು ಕುಮಾರ್, ಬಾಣಾವರ ಕಿರಣ್, ವಿರೂಪಾಕ್ಷ, ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಸಿಂಧು ಇತರರಿದ್ದರು.

## ಇಬ್ಬರು ಪಿಎಸ್‌ಐಗಳ ವರ್ಗಾವಣೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಇಬ್ಬರು ಪಿಎಸ್‌ಐಗಳನ್ನು ವರ್ಗಾವಣೆ ಮಾಡಿ ದಕ್ಷಿಣ ವಲಯ ಪೊಲೀಸ್ ಮಹಾ ನಿರ್ದೇಶಕ ಡಾ. ಎಂ.ಬಿ. ಬೋರಲಿಂಗಯ್ಯ ಅವರು ಆದೇಶಿಸಿದ್ದಾರೆ.

ಹಾಸನ ಸಂಚಾರ ಪೊಲೀಸ್ ಠಾಣೆ 1ರಲ್ಲಿದ್ದ ಸಲ್ಮಾನ್ ಖಾನ್ ತಂಬೋಳಿ ಅವರನ್ನು ಸಕಲೇಶಪುರ ತಾಲ್ಲೂಕು ಯಸಳೂರು ಠಾಣೆಗೆ ಹಾಗು ಸ್ಥಳ ನಿರೀಕ್ಷೆಯಲ್ಲಿದ್ದ (ಜಿಲ್ಲಾ ಪೊಲೀಸ್ ಕಚೇರಿ)ಎಂ. ಶ್ರೀನಿವಾಸ್ ಅವರನ್ನು ಹಾಸನ ಸಂಚಾರ ಠಾಣೆಗೆ ವರ್ಗಾವಣೆ ಮಾಡಲಾಗಿದೆ.

## ವಸ್ತ್ರಸಂಹಿತೆ ಜಾರಿಯಾಗದಿದ್ದರೆ ಪೊಲೀಸ್ ಇಲಾಖೆಗೆ ಕಳಂಕ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ದರ್ಶನೋತ್ಸವ ನಿಮಿತ್ತ ದೇವಾಲಯದೊಳಗೆ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗೆ ವಸ್ತ್ರಸಂಹಿತೆ ಜಾರಿಗೊಳಿಸಲಾಗಿದೆಯಾದರೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಸಿಬ್ಬಂದಿಗೆ ಆ ಬಗ್ಗೆ ಸೂಚನೆ ನೀಡಿಲ್ಲವೆಂದು ಬಿಜೆಪಿ ಮುಖಂಡ ದೇವರಾಜೇಗೌಡ ಅವರು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಸೆ.30ರಂದು ಹಿಂದೂ ಧಾರ್ಮಿಕ ದತ್ತಿ ಇಲಾಖೆಯಿಂದ ವಸ್ತ್ರಸಂಹಿತೆ ಕಡ್ಡಾಯಗೊಳಿಸಿ ಆದೇಶ ಪ್ರಕಟವಾಗಿದ್ದರೂ ಪೊಲೀಸ್ ವರಿಷ್ಠಾಧಿಕಾರಿ ಗಂಭೀರವಾಗಿ ಪರಿಗಣಿಸಿಲ್ಲ. ವಸ್ತ್ರ ಸಂಹಿತೆ ಜಾರಿಗೊಳಿಸದಿದ್ದರೆ ಪೊಲೀಸ್ ಇಲಾಖೆಗೆ ಕಳಂಕವೆಂದರು.



ಹಾಸನಾಂಬ ಜಾತ್ರಾ ಮಹೋತ್ಸವ ಯಶಸ್ಸಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಉತ್ತಮ ಯೋಜನೆ ರೂಪಿಸಿದ್ದಾರೆ. ಗಣ್ಯರು, ಅತಿ ಗಣ್ಯರ ಪ್ರವೇಶಕ್ಕೆ ಸಮಯ ನಿಗದಿ, ಒಬ್ಬ ಅತಿಥಿ ಜೊತೆಗೆ ನಾಲ್ವರಿಗಷ್ಟೇ ಪ್ರವೇಶ, ಶಿಷ್ಟಾಚಾರ ಪಾಲನೆ ಉದ್ದೇಶದಿಂದ ಸರ್ಕಾರಿ ವಾಹನದಲ್ಲೇ ದೇವಸ್ಥಾನಕ್ಕೆ ಕರೆದೊಯ್ಯುವ ನಿರ್ಧಾರದಿಂದ ಅನಗತ್ಯ ಗೊಂದಲಕ್ಕೆ ಕಡಿ

» ನಾಲ್ಕನೇ ಪುಟದಲ್ಲಿ

## ಪೌರ ಕಾರ್ಮಿಕರಿಗೆ ನಿವೇಶನ ಕಲ್ಪಿಸಲು ಬದ್ಧ


**ಶಾಸಕ ಹೆಚ್.ಕೆ.ಸುರೇಶ್ ಭರವಸೆ | ಸ್ವಚ್ಛತಾ ಕಾರ್ಮಿಕರ ಕೊಡುಗೆ ಶ್ಲಾಘನೆ**

• ಪ್ರಜೋದಯ ವರದಿ

**ಬೇಲೂರು:** ಪಟ್ಟಣದ ಸ್ವಚ್ಛತೆಗೆ ಶ್ರಮಿಸುತ್ತಿರುವ ಪೌರ ಕಾರ್ಮಿಕರಿಗೆ ನಿವೇಶನ ನೀಡಲು ಬದ್ಧನಾಗಿದ್ದೇನೆಂದು ಶಾಸಕ ಹೆಚ್.ಕೆ. ಸುರೇಶ್ ಅವರು ಭರವಸೆ ನೀಡಿದರು.

ಪಟ್ಟಣದ ಆರ್‌ವಿ ಕಲ್ಯಾಣ ಮಂಟಪದಲ್ಲಿ ಪುರಸಭೆ ವತಿಯಿಂದ ಬುಧವಾರ ನಡೆದ ಪೌರಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಸ್ವಚ್ಛತೆಯಲ್ಲಿ ಪೌರ ಕಾರ್ಮಿಕರ ಕೊಡುಗೆ ಎಷ್ಟಿದೆ ಎಂಬುವುದನ್ನು ಪ್ರಧಾನಿ ನರೇಂದ್ರ ಮೋದಿ ಅವರು ವಿವರಿಸಿದ್ದಾರೆ. ಪೌರ ಕಾರ್ಮಿಕರು ಮಳೆ, ಗಾಳಿ, ಚಳಿ ಎನ್ನದೇ ಸೂರ್ಯೋದಕ್ಕೂ ಮೊದಲೇ ಕರ್ತವ್ಯಕ್ಕೆ ಹಾಜರಾಗುತ್ತಾರೆ. ಪೌರ ಕಾರ್ಮಿಕರಿಲ್ಲದ ಪಟ್ಟಣವನ್ನು ಸ್ಮರಿಸುವುದು ಅಸಾಧ್ಯ. ಕಷ್ಟಪಟ್ಟು ಕೆಲಸ ಮಾಡುವ ಅವರಿಗೆ ಸಲ್ಲಬೇಕಾದ ಸವಲತ್ತು ದೊರಕಬೇಕು. ಪೌರ ಕಾರ್ಮಿಕರು ತಮ್ಮ ಕೆಲಸವನ್ನು ಪ್ರಾಮಾಣಿಕವಾಗಿ, ಶ್ರದ್ಧೆಯಿಂದ ಮನಪೂರ್ವಕವಾಗಿ ಮಾಡುತ್ತಿದ್ದಾರೆ. ಚನ್ನಕೇಶವಸ್ವಾಮಿ ರಥೋತ್ಸವದಲ್ಲಿ

» ನಾಲ್ಕನೇ ಪುಟದಲ್ಲಿ



**ಬಿ.ಶಿವರಾಮ್ ಹೆಸರು ಪ್ರಸ್ತಾಪ: ಗದ್ದಲ**

ಪುರಸಭೆ ಪೌರ ಕಾರ್ಮಿಕರಿಗೆ ನಿವೇಶನ ನೀಡಲು ಕ್ರಮ ಕೈಗೊಳ್ಳಲಾಗಿತ್ತಾದರೂ ಮಾಜಿ ಸಚಿವ ಬಿ.ಶಿವರಾಮ್ ಮಾತು ಕೇಳಿ ಸದಸ್ಯ ಬಿ.ಗಿರೀಶ್ ನ್ಯಾಯಾಲಯ ಮೆಟ್ಟಿಲೇರಿದ್ದರಿಂದ ಯೋಜನೆ ನೆನೆಗುದಿಗೆ ಬಿದ್ದಿದೆ ಎಂದು ಮಾಜಿ ಅಧ್ಯಕ್ಷ ಎ.ಆರ್.ಅಶೋಕ್ ಪ್ರಸ್ತಾಪಿಸಿದ್ದರಿಂದ ಕಾರ್ಯಕ್ರಮದಲ್ಲಿ ಗದ್ದಲ ಸೃಷ್ಟಿಯಾಯಿತು.

ನಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಪೌರ ಕಾರ್ಮಿಕರಿಗೆ ನಿವೇಶನ ನೀಡಲು ಸಿದ್ಧತೆ ನಡೆಸಿದ್ದೆ. ಬಿ.ಶಿವರಾಮ್ ಅವರ ಕುಮ್ಮಕ್ಕಿನಿಂದ ಕೋರ್ಟ್ ಮೊರೆ ಹೋದರು. ಹೀಗಾದರೆ ಹೇಗೆ ನಿವೇಶನ ನೀಡಲು ಸಾಧ್ಯವೆಂದರು.

ಅದಕ್ಕೆ ಸದಸ್ಯ ಜಗದೀಶ್ ಧ್ವನಿಗೂಡಿಸಿ, ಮಾಜಿ ಅಧ್ಯಕ್ಷ ಬಿ.ಗಿರೀಶ್ ಅವರೇ ನ್ಯಾಯಾಲಯದ ಬಾಗಿಲು ತಟ್ಟಿದ್ದಾರೆ. ಮತ್ತೊಂದೆಡೆ ಪೌರ ಕಾರ್ಮಿಕರಿಗೆ ನಿವೇಶನ ನೀಡಬೇಕೆಂದು ಮಾತನಾಡುತ್ತಾರೆ. ಅವರೇ ನ್ಯಾಯಾಲಯಕ್ಕೆ ಹೋಗಿ ಸಭೆಯಲ್ಲಿ ಪೌರ ಕಾರ್ಮಿಕರ ಪರ ಸಹಾನುಭೂತಿ ತೋರಿದರೆ ಏನು ಪ್ರಯೋಜನವೆಂದರು. ಹೀಗಾಗಿ ಸಭೆಯಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು. ಮಾಜಿ ಸಚಿವರ ಹೆಸರು ಹೇಳಿದ ತಕ್ಷಣ ಮಾಜಿ ಅಧ್ಯಕ್ಷೆ ತೀರ್ಥಕುಮಾರಿ ಅವರು ಮಧ್ಯ ಪ್ರವೇಶಿಸಿ ಪೌರ ಕಾರ್ಮಿಕರ ದಿನಾಚರಣೆ ವಿವಾದಕ್ಕೆ ಕಾರಣವಾಗಬಾರದೆಂದು ಪರಿಸ್ಥಿತಿ ತಿಳಿಗೊಳಿಸಿದರು.




CMYK CMYK CMYK CMYK

# ಸಮಸ್ತ ಭಕ್ತರ ಇಷ್ಟಾರ್ಥ ಈಡೇರಿಸುವ ಹಾಸನಾಂಬ

## ವರ್ಷಕ್ಕೊಮ್ಮೆ ದರ್ಶನ ಭಾಗ್ಯ । ಇಂದಿನಿಂದ ಅ. 23ರ ವರೆಗೆ ಜಾತ್ರಾ ವೈಭವ



ಹಾಸನದ ಅಧಿದೇವತೆ ಹಾಸನಾಂಬ ನಾಡಿನ ಐತಿಹಾಸಿಕ ದೇವಾಲಯಗಳಲ್ಲಿ ಒಂದು. ಏಕೆಂದರೆ ಈ ದೇವಾಲಯ ಬಾಗಿಲು ತೆರೆಯುವುದು ವರ್ಷಕ್ಕೆ ಒಂದು ಬಾರಿ ಮಾತ್ರ. ಅದೂ ಕನಿಷ್ಟ 7 ದಿನ ಗರಿಷ್ಟ 15 ದಿನವಷ್ಟೇ ದೇವಿಯ ದರ್ಶನ ಭಾಗ್ಯ ಸಿಗುವುದು. ಇದು ಒಂದೆಡೆಯಾದರೆ, ಹಾಸನಾಂಬ ಪವಾಡ ಮೂರ್ತಿಯಾಗಿದ್ದು, ಬೇಡಿಕೊಂಡ ಇಷ್ಟಾರ್ಥವನ್ನು ಸಿದ್ಧಿಸಿಯೇ ತೀರುತ್ತಾಳೆ ಎಂಬ ಬಲವಾದ ನಂಬಿಕೆ ಇರುವುದರಿಂದ ಜಿಲ್ಲೆ ಮಾತ್ರವಲ್ಲದೇ ರಾಜ್ಯ ಹಾಗೂ ದೇಶದ ಒಳ-ಹೊರಗೂ ಹಾಸನಾಂಬ ದೇವಿಗೆ ಅಪಾರ ಭಕ್ತರಿದ್ದಾರೆ.

ಜನನಿ ಜನ್ಮ ಭೂಮಿಶ್ಚ ಸ್ವರ್ಗಾದಪಿ ಗರೀಯಸಿ. ಅಂದರೆ ತಾಯಿ ಹಾಗೂ ಜನ್ಮ ಭೂಮಿ ಇರುವೆಡೆ ಸ್ವರ್ಗವಿದೆ ಎಂದರ್ಥ. ದೇಶದಲ್ಲಿಕೋಟ್ಯಾನುಕೋಟಿ ದೇವತೆಗಳಿದ್ದರೂ ನಾವು ಮಾತ್ರ ದೇವತೆಗೆ ಮೊದಲ ಗೌರವ ಸಲ್ಲಿಸುತ್ತಾ ಬಂದಿದ್ದೇವೆ. ಹಾಸನ ಜನರ ಪಾಲಿಗೆ ಹಾಸನಾಂಬ ಅಂಥದೇ ಸ್ಥಾನ ಅಲಂಕರಿಸಿದ್ದಾಳೆ ಎಂದು ಅನೇಕರು ಹೇಳುವುದುಂಟು. ಹಾಸನಾಂಬ ಅನುಪಮ ಶಕ್ತಿದೇವತೆ, ಸಪ್ತ ಮಾತೃಕೆಯರಲ್ಲಿ ಒಬ್ಬಳಾದ ದೇವಿ ಹಾಸನ ನಗರದ ಗ್ರಾಮ ದೇವತೆಯೂ ಹೌದು.

ಹಾಸನಾಂಬೆಯ ದೇಗುಲಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು, 12ನೇ ಶತಮಾನದಲ್ಲಿ ಕೃಷ್ಣಪ್ಪ ನಾಯಕ ಎಂಬ ಪಾಳೇಗಾರ ಈ ದೇವಾಲಯ ನಿರ್ಮಿಸಿದ ಎಂಬ ಐತಿಹ್ಯವಿದೆ. ಹಿಂದೆ ಸುಣ್ಣದ ಗುಡಿಯಾಗಿದ್ದ ದೇವಾಲಯ, ಇತ್ತೀಚೆಗೆ ಪುನರ್ ನವೀಕರಣ ಗೊಂಡಿದೆ. ಆದರೆ ಗರ್ಭಗುಡಿ ಮಾತ್ರ ಆರಂಭದಲ್ಲಿ ಯಾವ ರೂಪದಲ್ಲಿತ್ತೋ ಹಾಗೆಯೇ ಇದೆ. ಅಲ್ಲಿ ಹಾಸನಾಂಬ ಹುತ್ತದ ರೂಪದಲ್ಲಿ ನೆಲೆಸಿದ್ದಾಳೆ. ಹಾಸನ ಜಿಲ್ಲೆಯ ಬೇಲೂರು, ಹಳೇಬೀಡು, ಶ್ರವಣಬೆಳಗೊಳದಂತೆ ವಿಶ್ವ ಪ್ರಸಿದ್ಧ ಸುಂದರ ಶಿಲ್ಪ ಕಲೆಯ ನವಿರಾದ ಕೆತ್ತನೆ ಇಲ್ಲಿಲ್ಲವಾದರು, ದೇವಿಯ ಪವಾಡದಿಂದಾಗಿ ಅಮ್ಮನ ಆರಾಧಕರು ಅಪಾರ ಸಂಖ್ಯೆಯಲ್ಲಿದ್ದಾರೆ ಎಂಬುದು ಜನ ಜನಿತ.

ದೇಗುಲ ನಿರ್ಮಾಣವಾಗಿದ್ದು ಯಾವಾಗ:

ಹಾಸನಾಂಬ ದೇವಾಲಯವನ್ನು ಕ್ರಿ.ಶ. 12ನೇ ಶತಮಾನದಲ್ಲಿ ಕೃಷ್ಣಪ್ಪ ನಾಯಕ ಪಾಳೆಗಾರ ದೇವಾಲಯ ಕಟ್ಟಿಸಿದ ಎಂಬ ಬಗ್ಗೆ ಹಾಸನ ತಾಲ್ಲೂಕಿನ ಕುದರಗುಂಡಿ ಗ್ರಾಮದಲ್ಲಿರುವ ಕ್ರಿ.ಶ.1140ರ ಶಿಲಾ ಶಾಸನದಲ್ಲಿ ಉಲ್ಲೇಖವಿದೆ.

ಸ್ಥಳಪುರಾಣದ ಪ್ರಕಾರ ಸಪ್ತಮಾತೃಕೆಯರಾದ ವೈಷ್ಣವಿ, ಇಂದ್ರಾಣಿ, ಮಹೇಶ್ವರಿ, ಕೌಮಾರಿ, ಬ್ರಾಹ್ಮಿದೇವಿ, ವರಾಹಿ ಮತ್ತು ಚಾಮುಂಡಿ ದೇವಿಯರು ಕಾಶಿಯಿಂದ ದಕ್ಷಿಣದ ಕಡೆಗೆ ವಾಯು ವಿಹಾರಕ್ಕಾಗಿ ತೆರಳಿದ್ದಾಗ ಹಾಸನದ ಪ್ರಕೃತಿ ಸೌಂದರ್ಯಕ್ಕೆ ಮನಸೋತು ಇಲ್ಲಿಯೇ ನೆಲೆಸಲು ನಿರ್ಧರಿಸಿದರಂತೆ. ಸಪ್ತಮಾತೃಕೆಯರಲ್ಲಿ ವೈಷ್ಣವಿ, ಮಹೇಶ್ವರಿ, ಕೌಮಾರಿ ಹಾಸನಾಂಬ ದೇಗುಲದಲ್ಲಿ ಹುತ್ತದ ರೂಪದಲ್ಲಿ ನೆಲೆಸಿದ್ದರೆ, ಬ್ರಾಹ್ಮಿದೇವಿ ಆಲೂರು ತಾಲ್ಲೂಕು ಕೆಂಚಮ್ಮನ ಹೊಸಕೋಟೆಯಲ್ಲೂ ಇಂದ್ರಾಣಿ, ವರಾಹಿ, ಮತ್ತು ಚಾಮುಂಡಿ ದೇವಿ ಹಾಸನ ನಗರ ಹೃದಯ ಭಾಗದಲ್ಲಿರುವ ದೇವಿಗೆರೆಯಲ್ಲಿ ನೆಲೆಸಿದರು ಎಂದು ಪೌರಾಣಿಕ ಮಾಹಿತಿಯಿಂದ ನಂಬಲಾಗಿದೆ.

ಇದೇ ಕಾರಣಕ್ಕೆ ಈ ಮೊದಲು ಸಿಂಹಾಸನಪುರಿ ಎಂದಿದ್ದ ಹಾಸನ, ಹಾಸನಾಂಬ ನೆಲೆಸಿದ ಹಾಸನ ಎಂದು ಹೆಸರಾಯಿತು ಎಂಬ ವಾದವೂ ಇದೆ. ಇಷ್ಟೇ ಅಲ್ಲ ಹುತ್ತದ ರೂಪದಲ್ಲಿರುವ ಹಾಸನಾಂಬೆ ವಿಗ್ರಹದ ಎದುರು ಒಂದು ಪುಟ್ಟ ಕಲ್ಲಿದೆ. ಅದನ್ನು ಸೊಸೆ ಕಲ್ಲು ಎನ್ನುತ್ತಾರೆ. ಅದರ ಹಿನ್ನೆಲೆ ಏನೆಂದರೆ ನಿತ್ಯ ಸೊಸೆಗೆ ಕಿರುಕುಳ ನೀಡುತ್ತಿದ್ದ ಅತ್ತೆ, ಒಂದು ದಿನ ಸೊಸೆಯನ್ನು ಹಿಂಬಾಲಿಸಿ ಬಂದಳಂತೆ. ಆಗ ಸೊಸೆ ದೇವಿಯ ಧ್ಯಾನದಲ್ಲಿ ಮಗ್ನಳಾಗಿದ್ದನ್ನು ಕಂಡು ಸಿಟ್ಟಾದ ಅತ್ತೆ ಪಕ್ಕದಲ್ಲಿದ್ದ ಚಂದ್ರ ಬಟ್ಟಲಿಂದ ಸೊಸೆ ತಲೆಗೆ ಕುಕ್ಕಿದಳಂತೆ. ಆ ನೋವಿನಿಂದ ಅಮ್ಮಾ ಎಂದು ಕೂಗಿದ ಸೊಸೆಯ ಆರ್ತನಾದ ಕೇಳಿದ ಕರುಣಾಮಯಿ ಹಾಸನಾಂಬ, ಸೊಸೆಯ ಭಕ್ತಿಗೆ ಮೆಚ್ಚಿ ಯಾವಾಗಲೂ ನೀನು ನನ್ನ ಸನ್ನಿಧಾನದಲ್ಲೇ ನೆಲೆಸು ಎಂದ ನಂತರ ಸೊಸೆ ಅಲ್ಲೇ ಕಲ್ಲಾದಳಂತೆ. ಪ್ರತೀ ವರ್ಷ ಒಂದು ಭತ್ತದ ಕಾಳಿನ ಮೊನೆಯಷ್ಟು ಸೊಸೆಕಲ್ಲು ದೇವಿಯ ವಿಗ್ರಹದ ಕಡೆ ಚಲಿಸುತ್ತದೆ. ಅದು ದೇವಿ ಪಾದ ಸ್ಪರ್ಶಿಸಿದ ಕ್ಷಣವೇ ಕಲಿಯುಗ ಅಂತ್ಯ ಎನ್ನುವ ಐತಿಹ್ಯವಿದೆ.

ಈ ಎಲ್ಲಾ ಕಾರಣಗಳಿಂದ ಶತಮಾನಗಳಿಂದಲೂ ದೇವಿಯ ಮಹಿಮೆ ಅಪಾರ. ಪ್ರತಿ ವರ್ಷ ಆಶ್ವೀಜ ಮಾಸದ ಮೊದಲ ಗುರುವಾರ ದೇವಿಯ ಬಾಗಿಲು ತೆರೆದು, ಬಲಿಪಾಡ್ಯಮಿಯ ಮಾರನೇ ದಿನ ದೇವಾಲಯದ ಬಾಗಿಲು ಮುಚ್ಚುವ ಸಂಪ್ರದಾಯ ಸಾವಿರಾರು ವರ್ಷಗಳಿಂದಲೂ ಆನೂಚಾನವಾಗಿ ನಡೆದುಕೊಂಡು ಬಂದಿದೆ. ಈ ಬಾರಿಯೂ ಬರುವ ಅಕ್ಟೋಬರ್ 9 ರಿಂದ 23ರ ವರೆಗೆ ಹಾಸನಾಂಬೆ ದರ್ಶನಾಭಾಗ್ಯ ಕರುಣಿಸಲಿದ್ದಾಳೆ.

ದೇವಿಯ ವೈಶಿಷ್ಟ್ಯ ಎಂದರೆ ಗರ್ಭಗುಡಿಯ ಬಾಗಿಲು ಮುಚ್ಚುವಾಗ ಹಾಸನಾಂಬ ಎದುರು ಇಟ್ಟ ನೈವೇದ್ಯ ಹಳಸೋದಿಲ್ಲ, ಹಚ್ಚಿಟ್ಟ ಹಣತೆ ಆರುವುದಿಲ್ಲ. ಹಾಗೆಯೇ ಇಟ್ಟ ಹೂ ಬಾಡುವುದಿಲ್ಲ ಎಂಬ ನಂಬಿಕೆ ಹಿಂದಿನಿಂದಲೂ ಜನ ಮಾನಸದಲ್ಲಿ ಅಚ್ಚೊತ್ತಿರುವುದರಿಂದ ಹಾಸನಾಂಬ ಎಂದರೆ ಅಪಾರ ಮಂದಿಗೆ ಈಗಲೂ ಅಪಾರ ಭಕ್ತಿ-ಗೌರವ. ಇದೇ ಕಾರಣಕ್ಕೆ ಪ್ರತಿವರ್ಷ ದೇವಾಲಯದ ಬಾಗಿಲು ತೆರೆದಾಗಲೂ ಹಗಲು-ರಾತ್ರಿ, ಮಳೆ-ಬಿಸಿಲು ಎನ್ನದೇ ಲಕ್ಷಾಂತರ ಭಕ್ತರು ತಂಡೋಪ ತಂಡವಾಗಿ ಬಂದು ಸರದಿ ಸಾಲಿನಲ್ಲಿ ನಿಂತು ದೇವಿಯ ದರ್ಶನ ಪಡೆದು ಹೋಗುತ್ತಾರೆ.

ಈ ಮೊದಲು ಜಿಲ್ಲೆಯ ಭಕ್ತರಷ್ಟೇ ದೇವಾಯಕ್ಕೆ ಬಂದು ಹೋಗುತ್ತಿದ್ದರು. ಕೆಲವು ವರ್ಷಗಳಿಂದ ರಾಜ್ಯ ಹಾಗೂ ನೆರೆಯ ರಾಜ್ಯ ಮಾತ್ರವಲ್ಲದೆ ವಿದೇಶದಿಂದಲೂ ಆಗಮಿಕರು ಬಂದು ಹೋಗುತ್ತಿದ್ದಾರೆ. ಹಾಸನಾಂಬೆಯ ದರ್ಶನೋತ್ಸವ ಸಹಜವಾಗಿಯೇ ದೇವಿಯನ್ನು ನಂಬಿರುವ ಅಪಾರ ಭಕ್ತವೃಂದಕ್ಕೆ ಖುಷಿಯ ವಿಷಯವೇ. ಆ ಸಂದರ್ಭಕ್ಕಾಗಿ ಎದುರು ನೋಡುತ್ತಿರುವವರು ಕಡಿಮೆ ಇಲ್ಲ. ಪ್ರತಿ ವರ್ಷ ದೇವಿಯ ಗರ್ಭಗುಡಿ ಬಾಗಿಲು ಹಾಕಿದ ನಂತರ ಅದರ ಕೀಲಿ ಕೈ ಜಿಲ್ಲಾಡಳಿತದ ಬಳಿಯೇ ಇರುತ್ತದೆ.



# ಮೃತಪಟ್ಟ ಮಕ್ಕಳ ಕುಟುಂಬಗಳಿಗೆ ಸೂಕ್ತ ಪರಿಹಾರ

• ಪ್ರಜೋದಯ ವರದಿ

**ಸಕಲೇಶಪುರ:** ಕೃಷಿ ಹೊಂಡದಲ್ಲಿ ಅಕಸ್ಮಿಕವಾಗಿ ಮುಳುಗಿ ಮೃತಪಟ್ಟ ಮಕ್ಕಳ ಕುಟುಂಬಗಳಿಗೆ ಸರ್ಕಾರ ದಿಂದ ಸೂಕ್ತ ಪರಿಹಾರ ನೀಡಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಹಲಸುಲಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸೂರು ಗ್ರಾಮದಲ್ಲಿ ಕಳೆದ ಎರಡು ದಿನಗಳ ಹಿಂದೆ ನೀರಿನಲ್ಲಿ ಮುಳುಗಿ ಮೃತಪಟ್ಟ ಬಾಲಕರ ಮನೆಗಳಿಗೆ ಭೇಟಿ ನೀಡಿ ವೈಯಕ್ತಿಕ ಪರಿಹಾರವನ್ನು ನೀಡಿದ ನಂತರ ಅವರು ಮಾತನಾಡಿದರು.



ಬಾಲಕರು ಆಟವಾಡುವಾಗ ನೀರಿನಲ್ಲಿ ಮುಳುಗಿ ಮೃತಪಟ್ಟಿರುವುದು ಬೇಸರದ ಸಂಗತಿಯಾಗಿದೆ. ಮಕ್ಕಳ ಪೋಷಕರು ಕೂಲಿಕಾರ್ಮಿಕರಾಗಿದ್ದು ಅತ್ಯಂತ ಬಡವರಾಗಿರುವ ಕಾರಣ, ಈ ಘಟನೆಗೆ ವಿಶೇಷ ಪ್ರಕರಣವೆಂದು ಪರಿಗಣಿಸಿ ಸರ್ಕಾರದಿಂದ ಸೂಕ್ತ ಪರಿಹಾರ ಬಿಡುಗಡೆ ಮಾಡಬೇಕೆಂದು ಸ್ಥಳದಲ್ಲಿಯೇ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಹಾಗೂ ಜಿಲ್ಲಾಧಿಕಾರಿ ಲತಾ ಕುಮಾರಿರವರಿಗೆ ದೂರವಾಣಿ ಮೂಲಕ ಮನವಿ ಮಾಡಿರುವುದಾಗಿ ಹೇಳಿದರು.

# ಹಾಸನಾಂಬ ಜಾತ್ರೆ: ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು

• ಪ್ರಜೋದಯ ವರದಿ

**ಹಾಸನ:** ನಗರದ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವವನ್ನು ಪ್ರತಿ ವರ್ಷ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗುತ್ತಿದ್ದು, ಈ ನಿಟ್ಟಿನಲ್ಲಿ ಜಿಲ್ಲಾಡಳಿತ, ಹಾಸನ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯೊಂದಿಗೆ 2025ನೇ ಸಾಲಿನ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಅ.09 ರಿಂದ ಅ.21 ರವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ.

ಅ.9 ರಂದು ಜಾನಪದ ಜಾತ್ರೆ ಸಂಜೆ 6.30 ಹೇಮಾವತಿ ಪ್ರತಿಮೆ ಎದುರು, ಅ.10 ರಿಂದ ಅ.21 ರವರೆಗೆ ದೇವಸ್ಥಾನದ ಹತ್ತಿರ ಹಾಸನಾಂಬ ವೇದಿಕೆ (ಲೈವ್ ಕನ್ಸರ್ಟ್) ಬೆಳಗ್ಗೆ 5.30 ರಿಂದ 7.30 ರವರೆಗೆ, ಬೆಳಗ್ಗೆ 10 ರಿಂದ 1 ರವರೆಗೆ, ಸಂಜೆ 7.30 ರಿಂದ 10 ರವರೆಗೆ, ದೇವಿಗೆರೆ ವೃತ್ತದ ಬಳಿ ಸುಭಾಷ್ ಚೌಕ (ಹೇಮಾವತಿ) ಬೆ.6.30 ರಿಂದ 9.30 ರವೆಗೆ, ಸಿಲ್ವರ್ ಜುಬ್ಲಿ ಪಾರ್ಕ್ ನಲ್ಲಿ ಸಂಜೆ 7 ರಿಂದ ರಿಂದ 9 ರವರೆಗೆ. ಸದರಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.



ಅರಸೀಕೆರೆ ನಗರಸಭೆಯಿಂದ ನಮಸ್ತೇ ಯೋಜನೆಯಡಿ ಒಳಚರಂಡಿ ಮತ್ತು ಸೆಪ್ಟಿಕ್ ಟ್ಯಾಂಕ್ ಶುಚಿಗೊಳಿಸುವ ಕಾರ್ಮಿಕರಿಗೆ ಇ-ಕಿಟ್ಟನ್ನು ನಗರಸಭೆ ಅಧ್ಯಕ್ಷ ಎಂ. ಸಮೀವುಲ್ಲಾ ಅವರು ವಿತರಿಸಿದರು. ಉಪಾಧ್ಯಕ್ಷ ಮನೋಹರ್ ಮೇಸ್ತ್ರಿ ಪೌರಾಯುಕ್ತರು ಹೆಚ್.ಟಿ.ಕೃಷ್ಣಮೂರ್ತಿ ಹಾಜರಿದ್ದರು.

# ತಗಡೂರು ಗ್ರಾ.ಪಂ. ಅಧ್ಯಕ್ಷರಾಗಿ ಕುಮಾರ್




ಚನ್ನರಾಯಪಟ್ಟಣ ತಾಲ್ಲೂಕಿನ ತಗಡೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಜೆಡಿಸ್ ಬೆಂಬಲಿತ ಅಭ್ಯರ್ಥಿ ಕೆ.ಪಿ.ಕುಮಾರ್ ರವರ ಅವಿರೋಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷರನ್ನು ಶಾಸಕ ಸಿ.ಎನ್.ಬಾಲಕೃಷ್ಣ, ತಾಲ್ಲೂಕು ಪಂಚಾಯತಿ ಮಾಜಿ ಸದಸ್ಯ ಓಬಳಾಪುರ ಬಸವರಾಜು ಹಾಗು ಮುಖಂಡರು ಅಭಿನಂದಿಸಿದರು.

# ಇಂಡಿಯಾ ಬುಕ್ ಆಫ್ ರೆಕಾರ್ಡ್‌ಗೆ ಮೀಮ್

• ಪ್ರಜೋದಯ ವರದಿ

**ಸಕಲೇಶಪುರ:** ಅದ್ಭುತ ಜ್ಞಾಪಕ ಶಕ್ತಿಯ ಒಂದೂವರೆ ವರ್ಷದ ಮಗು ಇಂಡಿಯಾ ಬುಕ್ ಆಫ್ ರೆಕಾಡ್‌ನಲ್ಲಿ ಸ್ಥಾನ ಗಳಿಸಿ ಮೆಚ್ಚುಗೆಗೆ ಪಾತ್ರಳಾಗಿದ್ದಾಳೆ.

ಪಟ್ಟಣದ ಮಹೇಶ್ವರಿ ನಗರದ ತೌಸೀಫ್ ಮತ್ತು ಹಲೀಮಾ ಮಶ್ವತ್ ದಂಪತಿ ಪುತ್ರಿ ಮರಿಯಮ್ ಮೀಮ್ ವಿಶೇಷ ಸಾಧಕಿ. ಮರಿಯಮ್ ಮೀಮ್ ತೌಸೀಫ್ 10 ರಾಷ್ಟ್ರಗಳ ಧ್ವಜಗಳನ್ನು ಗುರುತಿಸಿ ಹೆಸರಿಸಬಲ್ಲಳು. ಜೊತೆಗೆ 13 ಪ್ರಾಣಿ, 16 ಪಕ್ಷಿ, 9 ಹೂವು, 5 ವಾಹನ, ಮನುಷ್ಯ ದೇಹದ 13 ಅಂಗಾಂಗ, 16 ತರಕಾರಿ ಮತ್ತು 14 ಹಣ್ಣುಗಳ ಹೆಸರನ್ನು ನಿಖರವಾಗಿ ಹೇಳುತ್ತಾಳೆ.

10 ವಿವಿಧ ವಸ್ತುಗಳ ಹೆಸರನ್ನು ಗುರುತಿಸಬಲ್ಲಳು. ಇಂಗ್ಲಿಷ್ ಅಕ್ಷರ ಮಾಲೆಯ ಪ್ರತಿ ಅಕ್ಷರಕ್ಕೆ ಸಂಬಂಧಿಸಿದ ಪದಗಳನ್ನು ಹೇಳುತ್ತಾಳೆ.




ಒಂದರಿಂದ ಹತ್ತರ ವರೆಗೆ ಸಂಖ್ಯೆಗಳನ್ನು ಎಣಿಸಬಲ್ಲಳು ಮತ್ತು ಎರಡು ಇಂಗ್ಲಿಷ್ ನರ್ಸರಿ ಪದ್ಯಗಳನ್ನು ಸರಾಗವಾಗಿ ಪಠಿಸಬಲ್ಲಳು.

ಅವಳ ತೊದಲು ನುಡಿಯಲ್ಲೇ ಹರಿಯುವ ಚುರುಕಾದ ಮಾತು, ತೀಕ್ಷ್ಣ ಬುದ್ಧಿಶಕ್ತಿ ಮತ್ತು ಅದ್ಭುತ ಜ್ಞಾಪಕ ಶಕ್ತಿಯಿಂದ ಎಲ್ಲರೂ ನಿಬ್ಬೆರಗಾಗಿದ್ದಾರೆ.

ಕಿರಿಯ ವಯಸ್ಸಿನಲ್ಲೇ ರಾಷ್ಟ್ರಮಟ್ಟದ ಸಾಧನೆ ಮಾಡಿರುವ ಮರಿಯಮ್ ಮೀಮ್ ತೌಸೀಫ್ ಅವರನ್ನು ನೆರೆಹೊರೆಯವರು, ಬಂಧು-ಬಳಗ ಮತ್ತು ಶಿಕ್ಷಣ ಪ್ರೇಮಿಗಳು ಅಭಿನಂದಿಸಿದ್ದಾರೆ.


ಇದೇ ಕಾರಣಕ್ಕೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ತಂಡವು ಮರಿಯಮ್ ಮೀಮ್‌ಗೆ ಪ್ರಶಸ್ತಿ ನೀಡಿದೆ.

# ಪಟಾಕಿ ಮಾರಾಟ: ಸುರಕ್ಷತಾ ಕ್ರಮ ಅನುಸರಿಸಲು ಸೂಚನೆ

• ಪ್ರಜೋದಯ ವರದಿ

**ಹಾಸನ:** ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಪಟಾಕಿ ಮಾರಾಟ ಮಾಡಲು ತಾತ್ಕಾಲಿಕ ಪರವಾನಗಿ ಪಡೆದು ಮಾರಾಟ ಮಾಡುವ ಸಂದರ್ಭದಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪಟಾಕಿ ಮಾರಾಟ ಕುರಿತು ನಡೆದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾ ಮಟ್ಟದಲ್ಲಿ ಒಂದು ಸಮಿತಿ ರಚಿಸಿ ಅವರ ಕರ್ತವ್ಯ ಮತ್ತು ಜವಾಬ್ದಾರಿ ನಿರ್ವಹಣೆಗೆ ಕ್ರಮ ವಹಿಸಬೇಕು. ಅ.19 ರಿಂದ 22 ವರೆಗೆ ಬೆಳಗ್ಗೆ 9.30 ರಿಂದ ಸಂಜೆ 7.30 ವರೆಗೆ ಮಾತ್ರ ಮಾರಾಟ ಮಾಡಬೇಕು. ಎಸ್.ಎಂ. ಕೃಷ್ಣ ನಗರದ ಸಿ.ಐ.ಟಿ.ಬಿ. ವ್ಯಾಪ್ತಿಯಲ್ಲಿರುವ ಖಾಲಿ ಪ್ರದೇಶದ



ನಿಗಧಿತ ಸ್ಥಳದಲ್ಲಿ ಮಾರಾಟ ಮಾಡಬೇಕು, ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡಬೇಕು. ಸ್ವಚ್ಚತೆಗೆ ಕ್ರಮವಹಿಸಬೇಕು ಹಾಗೂ ಪ್ರವೇಶ ಮತ್ತು ನಿರ್ಗಮನ ದ್ವಾರದಲ್ಲಿ ಸಿ.ಸಿ.ಕ್ಯಾಮರ ಅಳವಡಿಸಬೇಕು ಎಂದು ತಿಳಿಸಿದರು.

ಪರವಾನಗಿ ಪಡೆಯದೆ ಕಾನೂನು ಬಾಹಿರವಾಗಿ ಪಟಾಕಿ ಮಾರಾಟ ಮಾಡುವುದು ಕಂಡುಬಂದಲ್ಲಿ ತಕ್ಷಣ ಪ್ರಕರಣ ದಾಖಲಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಪಟಾಕಿ ಮಾರಾಟ ಮಾಡಲು ತಾತ್ಕಾಲಿಕ ಪರವಾನಗಿ ಪಡೆಯುವವರು ಎ.ಬಿ.ಸಿ.ಪೌಡರ್ ನಿರ್ವಹಣೆ ಬಗ್ಗೆ ಅಂಗಡಿ ಮಳಿಗೆ ತೆರೆಯುವ ಮುಂಚೆ ಕಡ್ಡಾಯವಾಗಿ ಅಗ್ನಿಶಾಮಕ ಇಲಾಖೆಯಿಂದ ತರಬೇತಿ ಪಡೆಯುವಂತೆ ತಿಳಿಸಿದರು.

ತಾತ್ಕಾಲಿಕ ಪಟಾಕಿ ಮಾರಾಟ ಪರವಾನಗಿಯು ಕೇವಲ ಪರವಾನಗಿಯಲ್ಲಿ ನಿರ್ದಿಷ್ಟಪಡಿಸಿದ ಅವಧಿಯ ವರೆಗೆ ಮಾತ್ರ ಚಾಲ್ತಿಯಲ್ಲಿರುತ್ತದೆ. ಸದರಿ ಪರವಾನಗಿಯು ಕೇವಲ ಪಟಾಕಿ ಮಾರಾಟ ಮಾಡುವ ಸಲುವಾಗಿ ನೀಡಲಿದ್ದು, ಯಾವುದೇ ರೀತಿ ಪಟಾಕಿಗಳನ್ನು ತಯಾರಿಸುವಂತಿಲ್ಲ ಮತ್ತು ಅವಧಿ ನಂತರ ಮಾರಾಟ ಮತ್ತು ಶೇಖರಣೆ ಮಾಡಬಾರದು. ತಾತ್ಕಾಲಿಕ ಪಟಾಕಿ ಮಳಿಗೆಗಳನ್ನು ವೈಜ್ಞಾನಿಕವಾಗಿ ಮಾರ್ಗಸೂಚಿಗಳನ್ವಯ ನಿರ್ಮಾಣ ಮಾಡಬೇಕು. ಎರಡು ಕಡೆಗಳಲ್ಲಿ ಸರಾಗವಾಗಿ ಗಾಳಿಯಾಡುವಂತಿರಬೇಕು ಮತ್ತು ಪ್ರತಿ ಅಂಗಡಿಗಳ ಮಧ್ಯೆ ಕನಿಷ್ಠ 3 ಮೀಟರ್ ಅಂತರವಿರಬೇಕು, ಸುಸಜ್ಜಿತ ವಿದ್ಯುತ್ ಸಂಪರ್ಕವಿರಬೇಕು, ಅಂಗಡಿ ಮುಂಭಾಗ ಮತ್ತು ಹಿಂಭಾಗದಲ್ಲಿ ಪ್ರವೇಶ ವ್ಯವಸ್ಥೆ ಇರಬೇಕು ಎಂದರು.

ತಾತ್ಕಾಲಿಕ ಪ್ರತಿ ಅಂಗಡಿ ಮಳಿಗೆಗಳಲ್ಲಿ ಬೆಂಕಿಯನ್ನು ತಡೆಗಟ್ಟಬಹುದಾದ ಸಾಧನಗಳನ್ನು ಕಡ್ಡಾಯವಾಗಿ ಉಪಯೋಗಿಸಬೇಕು. 9 ಲೀಟರ್ ಸಾಮರ್ಥ್ಯದ ವಾಟರ್ ಪ್ರೆಜರ್ ಮಾದರಿ ಅಗ್ನಿನಂದಕ ಹಾಗೂ ಎರಡು ಬಕೆಟ್‌ಗಳಲ್ಲಿ ನೀರನ್ನು ಮತ್ತು ಮರಳನ್ನು ಇಟ್ಟಿರಬೇಕು ಜೊತೆಗೆ ಪ್ರತಿ ಮಳಿಗೆ ಪಕ್ಕದಲ್ಲಿ 2 ಡ್ರಂಗಳಲ್ಲಿ ಕನಿಷ್ಟ 400 ಲೀಟರ್ ನೀರನ್ನು ಕಡ್ಡಾಯವಾಗಿ ಶೇಖರಿಸಿಟ್ಟಿರಬೇಕು ಎಂದು ತಿಳಿಸಿದರು.

ಮಳಿಗೆಗಳಲ್ಲಿ ಮತ್ತು ಮಳಿಗೆಗಳ 50 ಮೀಟರ್ ದೂರದವರೆಗೆ ಧೂಮಪಾನ ಅಥವಾ ಕುಕ್ಕಿಂಗ್ ವ್ಯವಸ್ಥೆ ನಿಷೇಧ ಮಾಡಿದೆ. ಪಟಾಕಿ ಮಾರಾಟ ಮಳಿಗೆಗಳಲ್ಲಿ ರಾತ್ರಿ ಯಾರು ಮಲಗಬಾರದು ಹಾಗೂ ಅಪ್ರಾಪ್ತ ವಯಸ್ಸಿನ ಬಾಲ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳುವಂತಿಲ್ಲ, ಸಾರ್ವಜನಿಕರು ರಾತ್ರಿ 10 ಗಂಟೆ ನಂತರ ಪಟಾಕಿಯನ್ನು ಸಿಡಿಸಬಾರದು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ತಹಸೀಲ್ದಾರ್ ಗೀತಾ, ಅಗ್ನಿ ಶಾಮಕ ದಳದ ಅಧಿಕಾರಿ ಹಾಗೂ ಪಟಾಕಿ ಮಾರಾಟಗಾರರ ಸಂಘದ ಅಧ್ಯಕ್ಷರು, ಮಾರಾಟಗಾರರು ಹಾಜರಿದ್ದರು.

# ರಕ್ತದ ಕೊರತೆಯಿಂದ ಬಳಲುತ್ತಿರುವವರು ಭಾರತದಲ್ಲೇ ಹೆಚ್ಚು

## ರಕ್ತದಾನದಿಂದ ಮೂವರ ಪ್ರಾಣ ಉಳಿಸಲು ಸಾಧ್ಯ: ಶಾಸಕ ಮಂಜು

• ಪ್ರಜೋದಯ ವರದಿ

**ಆಲೂರು:** ರಕ್ತದಾನ ಮಾಡುವ ಸಂದರ್ಭ, ಕಾರಣಗಳೇನಿದ್ದರೂ, ರಕ್ತದಾನ ಮಾಡುವುದರಿಂದ ಮೂವರ ಪ್ರಾಣ ಉಳಿಸಬಹುದು. ವಿಶ್ವದಲ್ಲೇ ಅತಿ ಹೆಚ್ಚು ರಕ್ತದ ಕೊರತೆಯಿಂದ ಬಳಲುತ್ತಿರುವವರು ಭಾರತ ದೇಶದಲ್ಲಿದ್ದಾರೆ ಎಂದು ಶಾಸಕ ಸಿಮೆಂಟ್ ಮಂಜು ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿರುವ ಶಾಸಕರ ಕಚೇರಿ ಎದುರು ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಯವರ 75ನೆ ಜನ್ಮದಿನದ ಅಂಗವಾಗಿ ಏರ್ಪಡಿಸಲಾಗಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಸಮಯಕ್ಕೆ ಸರಿಯಾಗಿ ರಕ್ತ ಸಿಗದ ಕಾರಣ ಪ್ರತಿವರ್ಷ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳು ಸಾವನ್ನಪ್ಪುತ್ತಿದ್ದಾರೆ. ಆ ಜೀವಗಳನ್ನು ಉಳಿಸಲು ರಕ್ತದಾನವನ್ನು ಪ್ರೋತ್ಸಾಹಿಸಬೇಕಾಗಿದೆ ಎಂದು ಸಲಹೆ ನೀಡಿದರು.

ವೈದ್ಯಕೀಯ ಕ್ಷೇತ್ರದಲ್ಲಿ ಎಷ್ಟೆ ಮುಂದುವರಿದರೂ, ರಕ್ತಕ್ಕೆ ಪರ್ಯಾಯವಿಲ್ಲ. ರಕ್ತವನ್ನು ಕೃತಕವಾಗಿ ತಯಾರಿಸಲು ಅಸಾಧ್ಯ. ಮನುಷ್ಯ ಮಾತ್ರ ಮತ್ತೊಬ್ಬ ಮನುಷ್ಯನಿಗೆ ರಕ್ತದಾನವನ್ನು ಮಾಡಿ ಜೀವ ಉಳಿಸಬಹುದು. ರಕ್ತದಾನ ಮಾಡುವುದರಿಂದ ಹೃದಯದ ಆರೋಗ್ಯ ಸುಧಾರಿಸುತ್ತದೆ. ನಿಯಮಿತ ರಕ್ತದಾನವು ದೇಹದಲ್ಲಿ ಕಬ್ಬಿಣದ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ರಕ್ತದ ಹರಿವನ್ನು ಹೆಚ್ಚಿಸುತ್ತದೆ ಮತ್ತು ಆರೋಗ್ಯವೂ ಉತ್ತಮವಾಗಿರುತ್ತದೆ ಎಂದು ಹೇಳಿದರು.



ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಾತನಾಡಿ, ಗಾಯಗೊಂಡವರಿಗೆ, ಶಸ್ತ್ರಚಿಕಿತ್ಸೆಗೆ ಒಳಗಾದವರಿಗೆ ಮತ್ತು ಮಾರಣಾಂತಿಕ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳಿಗೆ ಯಾವುದೇ ಪರಿಸ್ಥಿತಿಯಲ್ಲಿ ರಕ್ತದ ಅವಶ್ಯಕತೆ ಇರುತ್ತದೆ. ಆದರೆ ಅನೇಕ ಜನರು ರಕ್ತದಾನ ಮಾಡುವುದರಿಂದ ದುರ್ಬಲರಾಗುತ್ತೇವೆ ಎಂದು ಭಾವಿಸುತ್ತಾರೆ. ಆದರೆ ಅದು ತಾತ್ಕಾಲಿಕ ಮಾತ್ರ. ವಾಸ್ತವವಾಗಿ ರಕ್ತದಾನ ಮಾಡುವುದರಿಂದ ದೇಹಕ್ಕೆ ವಿವಿಧ ರೀತಿಯ ಆರೋಗ್ಯ ಪ್ರಯೋಜನಗಳಿವೆ. ಹಣಕ್ಕಾಗಿ ರಕ್ತದಾನ ಮಾಡುವುದು ಶಿಕ್ಷಾರ್ಹ ಅಪರಾಧ. 18 ರಿಂದ 60 ವರ್ಷದೊಳಗಿನ ಯಾರೆ ಆದರೂ ಲಿಂಗ ಬೇಧವಿಲ್ಲದೆ ರಕ್ತದಾನ ಮಾಡಬಹುದು. ರಕ್ತದ ಉತ್ಪನ್ನಗಳನ್ನು ಪರವಾನಿಗೆ ಹೊಂದಿರುವ ರಕ್ತನಿಧಿ ಕೇಂದ್ರಗಳಿಂದ ಮಾತ್ರ ಪಡೆಯಬೇಕು ಎಂದರು.

ಸಮಾರಂಭದಲ್ಲಿ ರಕ್ತದಾನ ಮಾಡಿದವರಿಗೆ ಸಸಿಗಳು ಮತ್ತು ಪ್ರಮಾಣ ಪತ್ರ ವಿತರಿಸಲಾಯಿತು. ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಆಡಿಟೋರಿಯಂ ನಿರ್ಮಾಣಕ್ಕೆ ಭೂಮಿ ಪೂಜೆ

• ಪ್ರಜೋದಯ ವರದಿ

**ಬೇಲೂರು:** ಪಟ್ಟಣ ಸಮೀಪವಿರುವ ವೈಡಿಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ತನ್ನದೇ ಆದ ಇತಿಹಾಸವಿದ್ದು, ಇಲ್ಲಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಒಳಾಂಗಣದಲ್ಲಿ ಆಡಿಟೋರಿಯಂ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಎಚ್.ಕೆ.ಸುರೇಶ್ ಹೇಳಿದರು.

ಪಟ್ಟಣ ಸಮೀಪದ ವೈಡಿಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಡಿಟೋರಿಯಂ ಕಾಮಗಾರಿಗೆ ಬುಧವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳ ಆಟ, ಪಾಠ ಸೇರಿದಂತೆ ಇನ್ನಿತರೆ ಚಟುವಟಿಕೆಗಳಿಗೆ ಹಾಗೂ ಕಾರ್ಯಕ್ರಮಗಳಿಗೆ ಅನುಕೂಲವಾಗುವಂತೆ ರೂಜಾ ಯೋಜನೆಯಡಿ 15 ಲಕ್ಷ ರೂ., ಯೋಜನೆಯಡಿ ಕೆಲಸ ಆಡಿಟೋರಿಯಂ ನಿರ್ಮಿಸಲಾಗುತ್ತಿದ್ದು,



ಮುಂದಿನ ಒಂದೂವರೆ ತಿಂಗಳೊಳಗೆ ಕಾಮಗಾರಿ ಮುಗಿಯಲಿದ್ದು, ನಂತರದಲ್ಲಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಅಲ್ಲದೆ ತಾಲೂಕಿನ ಜನರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ 4.20ಕೋಟಿ ರೂ, ವೆಚ್ಚದಲ್ಲಿ ಇದೇ ಕಾಲೇಜು ಆವರಣದಲ್ಲೆ ಬೃಹತ್ತಾದ ಕಲಾ ಮಂದಿರ ನಿರ್ಮಾಣಕ್ಕೂ ಈಗಾಗಲೇ ಎಲ್ಲ ಸಿದ್ಧತೆ ನಡೆದಿದ್ದು ಕೆಲಸವೇ ದಿನಗಳಲ್ಲಿ ಇದಕ್ಕೂ ಭೂಮಿ ಪೂಜೆ ನೆರವೇರಿಸಲಾಗುವುದು ಎಂದರು.

ಲೋಕೋಪಯೋಗಿ ಇಲಾಖೆ ಎಇಇ ಕೃಷ್ಣೇಗೌಡ, ವೈಡಿಡಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಮಹೇಶ. ಕಾಲೇಜು ಸಮಿತಿ ಸದಸ್ಯರಾದ ವೈ.ಎಸ್.ಸಿದ್ದೇಗೌಡ, ಹೆಬ್ಬಾಳು ಹಾಲಪ್ಪ, ಅಜಿತ್, ಉಪನ್ಯಾಸಕರಾದ ವೀರಭದ್ರಪ್ಪ ಇದ್ದರು.

# ಸ್ಥಳೀಯರಿಗೆ ತೊಂದರೆ: ಎಎಪಿ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವ ಹೆಸರಿನಲ್ಲಿ ದೇವಾಲಯದ ಸುತ್ತಮುತ್ತಲಿನ ನಿವಾಸಿಗಳನ್ನು ಕಡೆಗಣಿಸಿ, ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿ ಆಮ್ ಆದ್ಮಿ ಪಕ್ಷದ ವತಿಯಿಂದ ದೇವಾಲಯದ ಎದುರು ಬುಧವಾರ ಪ್ರತಿಭಟನೆ ನಡೆಸಲಾಯಿತು.

ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್ ಅವರು ಮಾತನಾಡಿ, ಹಾಸನಾಂಬ ಉತ್ಸವ ಹಾಸನ ಜನರ ಹಬ್ಬ, ಜನರ ಸಂಭ್ರಮ. ಆದರೆ, ಅಧಿಕಾರಿಗಳು ಇದನ್ನು ಆದಾಯದ ಮೂಲವನ್ನಾಗಿ ಮಾಡಿಕೊಂಡಿದ್ದಾರೆ. ಉತ್ಸವದ ಹೆಸರಿನಲ್ಲಿ ಸ್ಥಳೀಯತಿಗೆ ಕಿರುಕುಳ ನೀಡಲಾಗುತ್ತಿದೆ. ದೇವಾಲಯದ ಸುತ್ತಮುತ್ತಲಿನ ನಿವಾಸಿಗಳು ತಮ್ಮ ಮನೆಯಿಂದ ಹೊರಬರಲು ಸಹ ಸಾಧ್ಯವಾಗದ ಪರಿಸ್ಥಿತಿಯನ್ನು ಸೃಷ್ಟಿಸಲಾಗಿದೆ. ಎಲ್ಲೆಡೆ ಬ್ಯಾರಿಕೇಡ್‌ಗಳನ್ನು



ಹಾಕಿ ಅವರನ್ನು ದಿಗ್ಬಂಧನಕ್ಕೆ ಒಳಪಡಿಸಲಾಗಿದೆ ಎಂದು ದೂರಿದರು.

ಇಲ್ಲಿನ ಜನರಿಗೆ ಕುಡಿಯುವ ನೀರು, ಶೌಚಾಲಯ ಮತ್ತು ಸಂಚಾರ ಸೌಲಭ್ಯಕ್ಕೆ ತೊಂದರೆ ಉಂಟಾಗಿದೆ. ಉತ್ಸವಕ್ಕೂ ಮುನ್ನ ಸ್ಥಳೀಯರನ್ನು ಸಭೆಗೆ ಆಹ್ವಾನಿಸಿ ಅವರ ಸಮಸ್ಯೆಗಳನ್ನು ಆಲಿಸುವಲ್ಲಿ ಜಿಲ್ಲಾಡಳಿತ ಸಂಪೂರ್ಣ ವಿಫಲವಾಗಿದೆ. ಅಧಿಕಾರಿಗಳು ದೇವಿಯ ಉತ್ಸವವನ್ನು ಸಾರ್ವಜನಿಕ ಹಬ್ಬವೆಂದು ಪರಿಗಣಿಸದೆ, ಸರ್ಕಾರದ ಮೆಚ್ಚುಗೆ ಮತ್ತು ಆದಾಯದ ದೃಷ್ಟಿಯಿಂದ ಮಾತ್ರ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಹಾಸನಾಂಬ ಉತ್ಸವದ ಟೆಂಡರ್ ಪ್ರಕ್ರಿಯೆಯಲ್ಲಿಯೂ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ ತನಿಖೆ ನಡೆಸುವಂತೆ ಆಗ್ರಹಿಸಿದರು.

ಉತ್ಸವದಿಂದ ಮೂಲಕ ಸರ್ಕಾರ ಕೋಟಿ, ಕೋಟಿ ಆದಾಯ ಪಡೆಯುತ್ತಿದೆ. ಆದರೆ, ಸ್ಥಳೀಯರಿಗೆ ಯಾವುದೇ ಪ್ರಯೋಜನ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾಡಳಿತವು ಸ್ಥಳೀಯ ನಿವಾಸಿಗಳಿಗೆ ಪ್ರತ್ಯೇಕ ದರ್ಶನ ವ್ಯವಸ್ಥೆ ಕಲ್ಪಿಸಬೇಕು ಮತ್ತು ಅವರ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಒದಗಿಸಬೇಕು. ಇಲ್ಲವಾದರೆ ದೇವಾಲಯದ ಗರ್ಭಗುಡಿ ಬಾಗಿಲು ತೆರೆಯುವ ಮೊದಲ ದಿನದಿಂದ ಕಪ್ಪುಪಟ್ಟಿ ಧರಿಸಿ ಹಾಸನಾಂಬ ದೇವಸ್ಥಾನದ ಮುಂದೆ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.

# ನಾಳೆ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

**ಹಾಸನ:** ಕರ್ನಾಟಕ ಸರ್ಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಹಾಸನ, ಮನೋವೈದ್ಯಕೀಯ ವಿಭಾಗ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಅ.10 ರಂದು ಬೆಳಿಗ್ಗೆ 9.30 ಗಂಟೆಗೆ ಹಿಮ್ಸ್ ಆಸ್ಪತ್ರೆಯಲ್ಲಿ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯ ಕೊಠಡಿಯ ಉದ್ಘಾಟನೆಯೊಂದಿಗೆ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯನ್ನು ಆಯೋಜಿಸಲಾಗಿದೆ. ಬೆಳಿಗ್ಗೆ 10 ಗಂಟೆಗೆ ಡಾ.ಬಿ.ಆರ್ ಅಂಬೇಡ್ಕರ್ ಭವನದ ವರೆಗೆ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ.


# ಜನ ಜೀವನ ಸುಗಮಗೊಳಿಸುವ ಹಾದಿಯಲ್ಲಿ ಹೆಗ್ಗಡೆ

• ಪ್ರಜೋದಯ ವರದಿ

**ಹಳೇಬೀಡು:** ಲೆಕ್ಕವಿಲ್ಲದಷ್ಟು ಭಕ್ತರನ್ನು ಹೊಂದಿರುವ ಧರ್ಮಸ್ಥಳ ಸಾಗರದಂತೆ ಬೆಳೆದಿದೆ. ಸಾಗರ ಎಂದಿಗೂ ಕ್ಷೀಣಿಸುವುದಿಲ್ಲ ಎಂದು ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ಬೇಲೂರು, ಗ್ರಾಮ ಪಂಚಾಯಿತಿ ಹಳೇಬೀಡು ಹಾಗೂ ಹಾಸನ ಜಿಲ್ಲಾ ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಆಶ್ರಯದಲ್ಲಿ ಬುಧವಾರ ಹಳೇಬೀಡಿನ ಬನಶಂಕರಿ ಕಲ್ಯಾಣ ಮಂಟಪದಲ್ಲಿ ನಡೆದ ಗಾಂಧಿ ಸ್ಮರಣೆ ಹಾಗೂ ದುಶ್ಚಟಗಳ ವಿರುದ್ಧ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶೈಕ್ಷಣಿಕ, ಧಾರ್ಮಿಕ, ಸಾಮಾಜಿಕ ಹಾಗೂ ಜನ ಜೀವನ ಸುಗಮಗೊಳಿಸುವ ಹಾದಿಯಲ್ಲಿ ಹೆಗ್ಗಡೆಯವರ ಹೆಜ್ಜೆ ಸಾಗುತ್ತಿದೆ. ಆದರೂ ದ್ವೇಷ, ಅಸೂಯೆಯಿಂದ ಸಮಾಜದಲ್ಲಿ ಶಾಂತಿ ಕದಡುವ ಕೆಲಸ ಆಗುತ್ತಿದೆ. ಜನರು ಉತ್ತಮ ಕೆಲಸಗಳಿಗೆ ಪ್ರೋತ್ಸಾಹ ನೀಡಬೇಕು. ಉತ್ತಮ ಕೆಲಸ ಮಾಡುವವರಿಗೆ ಕಷ್ಟಗಳು ಎದುರಾಗುವುದು ಸಹಜ. ದುಷ್ಟ ಶಕ್ತಿಗಳು ದೇವತೆಗಳ ಉತ್ತಮ ಕಾರ್ಯಕ್ಕೆ ಅಡ್ಡಿಪಡಿಸಿವೆ. ಆದರೂ ದೇವತೆಗಳಿಗೆ ಗೆಲುವಾಗಿದೆ ಎಂದು ಪುರಾಣ ಪುಣ್ಯ ಕಥೆಗಳು ಹೇಳುತ್ತವೆ. ಹೆಗ್ಗಡೆ ಅವರ ಶ್ರಮದಿಂದ ದುಶ್ಚಟ ಮುಕ್ತ, ವಿದ್ಯಾವಂತ, ಸ್ವಾವಲಂಬಿ ಸಮಾಜ ಕಾಣುತ್ತಿದ್ದೇವೆ. ಸಮಾಜದ ಉದ್ಧಾರಕ್ಕೆ ಹೆಗ್ಗಡೆ ಅವರು ಕೈಗೊಳ್ಳುವ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಸ್ವಾಮೀಜಿ ಹೇಳಿದರು.




ದುಶ್ಚಟಗಳಿಂದ ಆರೋಗ್ಯ ಹಾಳಾಗುವುದಲ್ಲದೆ ಸಂಸಾರ ಸಹ ಬೀದಿಗೆ ಬರುವ ಸಾಧ್ಯತೆ ಇರುತ್ತದೆ. ಮಕ್ಕಳಲ್ಲಿ ಉತ್ತಮ ವ್ಯಕ್ತಿತ್ವ ರೂಪಿಸುವುದಕ್ಕೂ ಕಷ್ಟವಾಗುತ್ತದೆ. ದುಶ್ಚಟ ಮುಕ್ತ ಸಮಾಜದಿಂದ ಹಳ್ಳಿಗಳ ಉದ್ಧಾರ ಆಗುತ್ತದೆ ಎಂದು ಗಾಂಧೀಜಿ ಹೇಳಿದ್ದಾರೆ. ಹಳ್ಳಿಗಳ ಉದ್ಧಾರದಿಂದ ದೇಶದ ಪ್ರಗತಿ ಸಾಧ್ಯ ಎಂಬ ಅವರ ಮಾತನ್ನು ಜನರು ಸಾರ್ಥಕಗೊಳಿಸಬೇಕು ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಎಚ್.ಆರ್.ಮಧು, ತಹಸೀಲ್ದಾರ್ ಶ್ರೀಧರ್ ಕಂಕನವಾಡಿ, ಜಿಲ್ಲಾ ಜನ ಜಾಗೃತಿ ವೇದಿಕೆ ಉಪಾಧ್ಯಕ್ಷ ಡಿ.ಎಲ್.ಸೋಮಶೇಖರ್, ಸದಸ್ಯ ದಯಾನಂದ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಸುರೇಶ್ ಮೊಯ್ಲಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಸುಮಾ ವೆಂಕಟೇಶ್, ಮಂಗಳೂರು ಎಜುಕೇಶನಲ್ ಟ್ರಸ್ಟ್ ಅಧ್ಯಕ್ಷ ಚಂದ್ರರಾಜ್ ಜೈನ್, ಜೀವ ವಿಮಾ ಪ್ರತಿನಿಧಿ ಎಚ್.ಎನ್.ಚಂದ್ರಶೇಖರ್, ಬನಶಂಕರಿ ಕಲ್ಯಾಣ ಮಂಟಪದ ಎಂ.ರವಿಕುಮಾರ್ ಇತರರರಿದ್ದರು.





ಸ್ವಾವಲಂಬನೆಯಿಂದ ಸ್ವಾತಂತ್ರ್ಯ

# ಸಬಲೀಕರಣದಿಂದ ಸಮಾನತೆ

## ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ

ಸಮಾನ ನ್ಯಾಯ - ಘನತೆಯ ಬದುಕಿಗಾಗಿ



### ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಗೆ ಚಾಲನೆ

- ಸೆಪ್ಟೆಂಬರ್ 15 ರಿಂದ 45 ಕೆಲಸದ ದಿನಗಳ ಅವಧಿಯಲ್ಲಿ ಸಮೀಕ್ಷಾ ಕಾರ್ಯ
- ರಾಜ್ಯದ ಎಲ್ಲಾ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳು ಹಾಗೂ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಸಮೀಕ್ಷೆ
- "KARMANI WEB APPLICATION" ಮೂಲಕ ಆನ್ ಲೈನ್ ಸಮೀಕ್ಷೆ
- ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರ ಮೂಲಕವೇ ಸಮೀಕ್ಷೆ ಕಾರ್ಯ ನಡೆಸುವ ವಿನೂತನ ಹೆಜ್ಜೆ

## ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ

ಪುನರ್ವಸತಿ, ಪುನರ್ ಜೀವನದ ಆಶಯದೊಂದಿಗೆ



### ದೇವದಾಸಿ ವೃತ್ತಿಯಿಂದ ಹೊರಬಂದ ಮಹಿಳೆಯರ ಸ್ಥಿತಿಗತಿಗಳ ವಸ್ತುನಿಷ್ಠ ಮಾಹಿತಿಗಾಗಿ ಮರುಸಮೀಕ್ಷಾ ಕಾರ್ಯ

- ಸೆಪ್ಟಂಬರ್ 15 ರಿಂದ ಏಕಕಾಲಕ್ಕೆ ರಾಜ್ಯದ 15 ಜಿಲ್ಲೆಗಳಲ್ಲಿ ಮರು ಸಮೀಕ್ಷೆ
- ಸೇವಾಸಿಂಧು ಪೋರ್ಟಲ್ ಮೂಲಕ ಸಮೀಕ್ಷೆಗಾಗಿ "WEB APPLICATION" ಬಳಕೆ
- ನಿಗದಿತ 15 ಜಿಲ್ಲೆಗಳ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಸಮೀಕ್ಷೆ
- ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲಬುರ್ಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ದತ್ತಾಂಶ ಸಂಗ್ರಹ

**ಈ ಮೇಲ್ಕಂಡ ಎರಡೂ ಸಮೀಕ್ಷೆಗಳಿಗೆ ಸಂಬಂಧಿಸಿದಂತೆ ಮಾಹಿತಿ ಪಡೆಯಲು**
**1800 599 2025 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ**

ಸಮಾಜದ ಮುಖ್ಯವಾಹಿನಿಯಿಂದ ಹೊರಗುಳಿದ ಎಲ್ಲಾ ಅವಕಾಶ ವಂಚಿತ ಸಮುದಾಯಗಳನ್ನು ಗುರುತಿಸಿ, ಅವರ ಘನತೆಯ ಬದುಕಿನ ಕನಸಿಗೆ ನೆರವಾಗುವುದು ನಮ್ಮ ಸರ್ಕಾರದ ಸಂಕಲ್ಪವಾಗಿದೆ.

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು


ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"

ಕರ್ನಾಟಕ ವಾರ್ತೆ

# ಇಂದಿನಿಂದ ಹಾಸನಾಂಬ ದೇವಿ ದರ್ಶನ



» **ಮೊದಲನೇ ಪುಟದಿಂದ**

**ಆಧುನಿಕ ತಂತ್ರಜ್ಞಾನಗಳ ಅಳವಡಿಕೆ**

ಜನದಟ್ಟಣೆ ಹಾಗು ವಾಹನ ದಟ್ಟಣೆ ನಿಯಂತ್ರಿಸಲು ಟ್ರಾಫಿಕ್ ರೂಟ್ ಮ್ಯಾಪ್ ಮತ್ತು ಹೆಚ್ಚುವರಿ ಪಾರ್ಕಿಂಗ್ ಸ್ಥಳಗಳನ್ನು ನಿಗದಿಪಡಿಸಲಾಗಿದೆ. ಅನಗತ್ಯ ಸಂಚಾರ ತಪ್ಪಿಸಲು ಪ್ರತ್ಯೇಕ ವೆಬ್‌ಸೈಟ್ ಸೃಜಿಸಿ ಎಲ್ಲಾ ಬಗೆಯ ನಿಯಮಗಳೊಂದಿಗೆ ಪಾರ್ಕಿಂಗ್ ಸ್ಥಳಗಳು ಹಾಗು ಭಕ್ತರು ದರ್ಶನದ ದ್ವಾರಗಳಿಗೆ ಪ್ರವೇಶ ಪಡೆಯಲು ಪೂರಕ ಸ್ಥಳಗಳ ಜಿಪಿಎಸ್ ಗೂಗಲ್ ರೂಟ್ ಮ್ಯಾಪ್ ಸೇರ್ಪಡೆ ಮಾಡಲಾಗಿದೆ. ಕೃತಕ ಬುದ್ಧಿಮತ್ತೆಗೆ ಪೂರಕ ಕ್ಯಾಮರಾಗಳನ್ನು ಅಳವಡಿಸಿ ತೊಂದರೆಯಾಗುವ ಸ್ಥಳಗಳನ್ನು ಪರಿಶೀಲಿಸಿ ಪರಿಹಾರ ಕ್ರಮಕ್ಕೆ ಮುತುವರ್ಜಿ ವಹಿಸಲಾಗಿದೆ. ವಿಶೇಷ ಚೇತನ ಹಾಗು 80 ವರ್ಷ ಮೇಲ್ಪಟ್ಟವರಿಗೆ ನೇರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಹಿಂದೂ ಧಾರ್ಮಿಕ ದತ್ತಿ ನಿಯಮದಂತೆ ವಸ್ತ್ರ ಸಂಹಿತೆ ಜಾರಿಗೊಳಿಸಿದ್ದು, ಭಕ್ತರು ಭಾರತೀಯ ಉಡುಗೆ ಧರಿಸಿ ಬರಬೇಕೆಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

# ಸರ್ಕಾರಿ ನೌಕರರ ಸರ್ವ ಸದಸ್ಯರ ವಾರ್ಷಿಕ ಸಭೆ

• ಪ್ರಜೋದಯ ವರದಿ

**ಹಾಸನ:** ನಗರದ ಸರ್ಕಾರಿ ನೌಕರರ ಭವನದಲ್ಲಿ ರಾಜ್ಯ ಸರ್ಕಾರಿ ನೌಕರರ 2024-25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಕೃಷ್ಣೇಗೌಡ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಂಘದ ರಾಜ್ಯ ಪರಿಷತ್ ಸದಸ್ಯ ರಾಜು ಅವರು ಮಾತನಾಡಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಟ್ಟಡ ಕಾಮಗಾರಿ ಸೇರಿ ವಿವಿಧ ಬೇಡಿಕೆಗಳ ಈಡೇರಿಸಲು ರಾಜ್ಯ ಸಂಘದಿಂದ ತುರ್ತಾಗಿ ಅನುಮೋದನೆ ಪಡೆಯಲಾಗುವುದೆಂದು ಭರವಸೆ ನೀಡಿದರು.

ಜಿಲ್ಲಾ ಖಜಾಂಜಿ ಕೆ.ಆರ್.ಹೇಮಂತ್ ಅವರು 2024-25ನೇ ಸಾಲಿನ ಲೆಕ್ಕಾ ಪರಿಶೋಧನಾ ವರದಿ ಮಂಡಿಸಿದರು. ಜಿಲ್ಲಾ ಕಾರ್ಯದರ್ಶಿಗಳಾದ ಡಾ.ಬಿ.ಎಂ.ಲಕ್ಷ್ಮೀಕಾಂತ್ ಅವರು ವಾರ್ಷಿಕ ಸಭೆಯ ನಡಾವಳಿಯನ್ನು ಸಭೆಯಲ್ಲಿ ಓದಿ ತಿಳಿಸಿದರು.

ಕಾರ್ಯಾಧ್ಯಕ್ಷ ವಿಷ್ಣುಪ್ರಕಾಶ್ ಅವರು ಸಂಘದ ಕಾರ್ಯಕ್ರಮಗಳು, ರಾಷ್ಟ್ರೀಯ ಹಬ್ಬಗಳ ಆಚರಣೆಯಲ್ಲಿ ಪರಿಪೂರ್ಣವಾಗಿ ಪಾಲ್ಗೊಳ್ಳಬೇಕೆಂದು ಕೋರಿದರು. ಸಂಘದ ಕಾರ್ಯಕಾರಿ ಸಮಿತಿ ಸದಸ್ಯರು, ನಿರ್ದೇಶಕರು, ತಾಲ್ಲೂಕು, ಯೋಜನಾ ಘಟಕದ ಅಧ್ಯಕ್ಷರು, ನೌಕರ ಮಿತ್ರರು ಸಭೆಯಲ್ಲಿ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿ ಸಲಹೆ ನೀಡಿದರು.

ಜಿಲ್ಲಾಧ್ಯಕ್ಷ ಬಿ.ಪಿ.ಕೃಷ್ಣೇಗೌಡ ಅವರು 2024-25ನೇ ಸಾಲಿನಲ್ಲಿ ನಡೆದಂತಹ ಎಲ್ಲಾ ಕಾರ್ಯಕ್ರಮಗಳು, ಮಾಸಿಕ ಸಭೆಗಳು ಮತ್ತು ಸರ್ಕಾರಿ ನೌಕರರ ಕ್ರೀಡಾಕೂಟದ ಬಗ್ಗೆ ಸವಿವರವಾಗಿ ವಿವರಿಸಿದರು. ನೂತನ ಕಟ್ಟಡ ಕಾಮಗಾರಿ ಹಾಗೂ ಮಳಿಗೆಗಳ ಹರಾಜು ಪ್ರಕ್ರಿಯೆ, ಪದಾಧಿಕಾರಿಗಳ ಆಯ್ಕೆ ಇನ್ನಿತರೆ ವಿಷಯಗಳ ಬಗ್ಗೆ ರಾಜ್ಯ ಸಂಘದಿಂದ ಅನುಮೋದನೆ ಪಡೆಯುವುದು ಹಾಗೂ ಮುಂದೆ ಮಾಡಬೇಕಾಗಿರುವ ಕಾರ್ಯಕ್ರಮ ಕುರಿತು ವಿಚಾರವನ್ನು ಸಭೆಯಲ್ಲಿ ಮಂಡಿಸಲಾಗಿ ಸಭಾ ಸದಸ್ಯರಿಂದ ಒಮ್ಮತದಿಂದ ಅನುಮೋದನೆ ಪಡೆಯಲಾಯಿತು.



# ಪೌರ ಕಾರ್ಮಿಕರಿಗೆ ನಿವೇಶನ ಕಲ್ಪಿಸಲು ಬದ್ಧ



» **ಮೊದಲನೇ ಪುಟದಿಂದ**

ಸಿಬ್ಬಂದಿ ಕಾರ್ಯ ಶ್ಲಾಘನೀಯ. ಪ್ರತಿವರ್ಷ ಪುರಸಭಾ ವತಿಯಿಂದ ಕಾರ್ಮಿಕರನ್ನು ಸನ್ಮಾನಿಸುತ್ತಿರುವುದು ಒಳ್ಳೆಯ ಬೆಳವಣಿಗೆ. ಪೌರ ಕಾರ್ಮಿಕರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಅಧಿವೇಶನದಲ್ಲಿ ಪ್ರಸ್ತಾಪಿಸುತ್ತೇನೆಂದು ಭರವಸೆ ನೀಡಿದರು.

ಪುರಸಭೆ ಪ್ರಭಾರ ಅಧ್ಯಕ್ಷೆ ಉಷಾ ಸತೀಶ್ ಅವರು ಮಾತನಾಡಿ, ಐತಿಹಾಸಿಕ ಪಟ್ಟಣಕ್ಕೆ ನಿತ್ಯ ಪ್ರವಾಸಿಗರು ಬರುತ್ತಾರೆ. ಸ್ವಚ್ಛತೆಯಿಂದ ಪಟ್ಟಣದ ಅಂದಚೆಂದ ಹೆಚ್ಚಿಸುವಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. ಬೇಲೂರು ವಿಶ್ವ ಮಟ್ಟದಲ್ಲಿ ಖ್ಯಾತಿಗಳಿಸಲು ಪೌರ ಕಾರ್ಮಿಕರ ಕೊಡುಗೆಯೂ ಕಾರಣವೆಂದರು.

ಮಾಜಿ ಅಧ್ಯಕ್ಷೆ ತೀರ್ಥಕುಮಾರಿ ಅವರು ಮಾತನಾಡಿ, ಮಳೆ, ಚಳಿ ಎನ್ನದೆ ಸ್ವಚ್ಛತಾ ಕಾರ್ಯ ನಡೆಸುವ ಪೌರಕಾರ್ಮಿಕರು ಇಂದಿನವರೆಗೂ ನಿವೇಶನ ಮತ್ತು ಮನೆ ಇಲ್ಲದೆ ಸಂಕಷ್ಟದ ಪರಿಸ್ಥಿತಿಯಲ್ಲಿದ್ದಾರೆ. ಶೀಘ್ರದಲ್ಲೇ ನಿವೇಶನ ವಿತರಿಸಬೇಕು. ಪೌರ ಕಾರ್ಮಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದಿಲ್ಲ. ಅವರಿಗೆ ಸರ್ಕಾರದ ಸವಲತ್ತುಗಳು ಸರಿಯಾಗಿ ತಲುಪುತ್ತಿಲ್ಲ. ಪೌರ ಕಾರ್ಮಿಕರು ಮತ್ತು ನೀರುಗಂಟಿಗಳ ನಡುವೆ ವೇತನ ಸೇರಿ ಅನೇಕ ವಿಚಾರಗಳಲ್ಲಿ ತಾರತಮ್ಯವಿದ್ದು ಸರ್ಕಾರ ಪರಿಹರಿಸಬೇಕೆಂದು ಆಗ್ರಹಿಸಿದರು.

ಪುರಸಭೆ ಮುಖ್ಯಾಧಿಕಾರಿ ಬಸವರಾಜ ಟಾಕಪ್ಪ ಶಿಗ್ಗಾವಿ, ಸದಸ್ಯರಾದ ಎ.ಆರ್.ಅಶೋಕ್, ಬಿ.ಗಿರೀಶ, ಜಮಾಲ್ಲುದ್ದೀನ್, ಅಶೋಕ್, ಪ್ರಭಾಕರ್, ಬಿ.ಸಿ.ಜಗದೀಶ್, ಮೀನಾಕ್ಷಿ ವೆಂಕಟೇಶ, ರತ್ನ ಸತ್ಯನಾರಾಯಣ, ಆರೋಗ್ಯ ಸಮಿತಿ ಸದಸ್ಯ ಬಿ.ಸಿ.ಹರೀಶ್, ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಜಯರಾಂ, ಆರೋಗ್ಯಾಧಿಕಾರಿ ಲೋಹಿತ್ ಮತ್ತು ಜ್ಯೋತಿ ಇತರರಿದ್ದರು.

# ರೈತರಿಗೆ ಮಂಜೂರಾದ ಭೂಮಿ ಏಕಾಏಕಿ ರದ್ದು

» **ಮೊದಲನೇ ಪುಟದಿಂದ**

ಮಾಡಬಾರದು. ಆದರೆ, ಅದನ್ನು ಯಾರೂ ಗಂಭೀರವಾಗಿ ಪರಿಗಣಿಸುತ್ತಿಲ್ಲ. ಸುಪ್ರೀಂ ಕೋರ್ಟ್ ಆದೇಶ ಪ್ರತಿಯೇ ಸಂಬಂಧಪಟ್ಟ ಅಧಿಕಾರಿ ಹಾಗು ಸಚಿವರ ಗಮನಕ್ಕೆ ಬಾರದಿರುವುದು ವಿಷಾದನೀಯವೆಂದರು.

**ಜಿಲ್ಲಾಧಿಕಾರಿ ಸ್ಪಂದಿಸಿದ್ದಾರೆ:** ಮೀಸಲು ಅರಣ್ಯ ಹೆಸರಿನಲ್ಲಿ ಜಿಲ್ಲೆಯ ರೈತರಿಗೆ ಆಗುತ್ತಿರುವ ಅನ್ಯಾಯದ ಕುರಿತು ಕಳೆದ 2 ತಿಂಗಳಿನಿಂದ ಸುದ್ದಿಗೋಷ್ಠಿ ಮೂಲಕ ಎಲ್ಲರ ಗಮನ ಸೆಳೆದಿದ್ದೇನೆ. ಸಾರ್ವಜನಿಕರು ಈ ಕುರಿತು ಈಗ ಚರ್ಚೆಯಲ್ಲಿ ತೊಡಗಿದ್ದಾರೆ. ಜಿಲ್ಲಾಧಿಕಾರಿ ಲತಾಕುಮಾರಿ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದಾಗ ವಿಚಾರ ಕುರಿತು ಸಮಗ್ರ ಚರ್ಚೆಯ ಅವಶ್ಯವಿದ್ದು, ಹಾಸನಾಂಬ ಜಾತ್ರಾ ಮಹೋತ್ಸವ ಬಳಿಕ ಸಭೆ ನಡೆಸುವುದಾಗಿ ಭರವಸೆ ನೀಡಿದ್ದಾರೆ. ಕೆಡಿಪಿ ಸಭೆಗಳಲ್ಲೂ ಜನಪ್ರತಿನಿಧಿಗಳು ಚರ್ಚಿಸುತ್ತಾರೆಂಬ ಭರವಸೆ ಮೂಡಿದೆಂದರು.

ನಾನು ಸಚಿವನಾಗಿದ್ದ ಸಂದರ್ಭದಲ್ಲಿ ರೈತರಿಗೆ ಭೂಮಿ ಮಂಜೂರಾತಿ ಮಾಡಿದ್ದೆ. ಈಗ ಅದೇ ಭೂಮಿ ಅರಣ್ಯ ಪ್ರದೇಶವೆಂದು ಘೋಷಿಸುತ್ತಿರುವುದು ನೋವು ತರಿಸಿದೆ. ಈ ಕಾರಣಕ್ಕೆ ನಾನು ಧ್ವನಿ ಎತ್ತಿದ್ದೇನೆ ಹೊರತು ಸರ್ಕಾರದ ವಿರುದ್ಧವಲ್ಲ. ನಮ್ಮದೇ ಸರ್ಕಾರ ಇದ್ದರೂ ತಪ್ಪುಗಳು ಕಂಡಾಗ ಮಾತನಾಡದೆ ಸುಮ್ಮನಿರಲು ಸಾಧ್ಯವಿಲ್ಲವೆಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ವಸ್ತ್ರ ಸಂಹಿತೆ ಜಾರಿಯಾಗದಿದ್ದರೆ ಪೊಲೀಸ್ ಇಲಾಖೆಗೆ ಕಳಂಕ

» **ಮೊದಲನೇ ಪುಟದಿಂದ**

ವಾಣ ಹಾಕಬಹುದು. ಈ ನಿರ್ಧಾರ ಕೈಗೊಂಡಿರುವುದಕ್ಕಾಗಿ ಸಚಿವರಿಗೆ ಅಭಿನಂದನೆ ಸಲ್ಲಿಸುತ್ತೇನೆಂದರು.

ದೇವಿ ಜಾತ್ರೆಯಲ್ಲಿ ಗೊಂದಲ ಉಂಟಾಗಬಾರದೆಂಬ ಕಾರಣಕ್ಕೆ ಹಾಕಿಕೊಂಡಿರುವ ನಿಯಮಗಳು ಕಟ್ಟುನಿಟ್ಟಾಗಿ ಜಾರಿಗೆ ಬರಬೇಕಂದರೆ ಜಿಲ್ಲೆಯ ಜನಪ್ರತಿನಿಧಿಗಳು ಸಹಕಾರ ನೀಡಬೇಕು. ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಚುನಾವಣೆ ಗೆಲ್ಲುವ ರಾಜಕಾರಣಿಗಳು ತಮ್ಮ ಬೆಂಬಲಿಗರಿಗೆ ಸಾವಿರ ರೂ. ಟಿಕೆಟ್ ಖರೀದಿಸಿ ಕೊಡುವ ಔದಾರ್ಯ ಮೆರೆಯಬೇಕು. ಸರದಿ ಸಾಲಿನಲ್ಲಿ ನಿಂತು ದೇವಿ ದರ್ಶನಕ್ಕೆ ಹೋಗಲು ಸಾಧ್ಯವಾಗದಂತವರು ಆರ್ಥಿಕವಾಗಿ ಸಬಲರಾಗದೆ ಇದ್ದವರು ನನ್ನನ್ನು ಸಂಪರ್ಕಿಸಿದರೆ ಶಕ್ತಾನುಸಾರ ಟಿಕೆಟ್ ಖರೀದಿಸಿ ಕೊಡುತ್ತೇನೆಂದು ಭರವಸೆ ನೀಡಿದರು. ಮುಖಂಡರಾದ ಶಂಕರ್, ತಿಲಕ್, ನಾಗರಾಜ್ ಇದ್ದರು.

## ಟ್ರ್ಯಾಕ್ಟರ್ ಹರಿದು ಮಹಿಳೆ ಸಾವು

• ಪ್ರಜೋದಯ ವರದಿ

**ಅರಕಲಗೂಡು:** ಕೆಎಸ್‌ಆರ್‌ಟಿಸಿ ಬಸ್‌ಗಾಗಿ ಕಾದು ರಸ್ತೆ ಪಕ್ಕ ನಿಂತಿದ್ದ ಮಹಿಳೆ ಮೇಲೆ ಟ್ರ್ಯಾಕ್ಟರ್ ಹರಿದು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಗಂಗೂರಿನಲ್ಲಿ ನಡೆದಿದೆ.

ಹಾಸನ ತಣ್ಣೀರುಹಳ್ಳ ನಿವಾಸಿ ರುಕ್ಮಿಣಿ ಮೃತರು. ಸಂಬಂಧಿಕರ ಮನೆಗೆ ತೆರಳಿದ್ದ ಅವರು ಹಾಸನಕ್ಕೆ ಬರಲು ಬಸ್‌ಗಾಗಿ ಕಾದು ನಿಂತಿದ್ದರು. ಈ ವೇಳೆ ಬೆಟ್ಟದಪುರ ಕಡೆಯಿಂದ ವೇಗವಾಗಿ ಬಂದ ಟ್ರ್ಯಾಕ್ಟರ್ ಚಾಲಕ ಡಿಕ್ಕಿ ಮಾಡಿದ್ದಾನೆ. ಅಪಘಾತದ ರಭಸಕ್ಕೆ ಗಂಭೀರ ಗಾಯಗೊಂಡಿದ್ದ ಮಹಿಳೆಯನ್ನು ಕೊಣನೂರು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಳೆಯ ದ್ವೇಷ: ವ್ಯಕ್ತಿ ಮೇಲೆ ಹಲ್ಲೆ

**ಬೇಲೂರು:** ಹಳೆಯ ದ್ವೇಷದಿಂದ ಅಪ್ಪ ಹಾಗು ಮಗ ಸೇರಿ ವ್ಯಕ್ತಿ ಮೇಲೆ ಕಬ್ಬಿಣದ ರಾಡ್‌ನಿಂದ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಅಂಗಡಿಹಳ್ಳಿ ಗ್ರಾಮದಲ್ಲಿ ಇತ್ತೀಚೆಗೆ ನಡೆದಿದೆ.

ಗಾಮದ ಲಕ್ಷ್ಮೀ ಎಂಬುವವರ ಅಳಿಯ ಅವಿನಾಶ್ ಗಾಯಾಳು. ಅ.6ರ ರಾತ್ರಿ 11ರ ಸಮಯದಲ್ಲಿ ಮನೆಗೆ ಏಕಾಏಕಿ ನುಗ್ಗಿದ ಅದೇ ಗ್ರಾಮದ ಪಂಜು ಮತ್ತು ಅವರ ಮಗ ಸುರೇಂದ್ರ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ನುಗ್ಗಿದ ಅವರು ರಾಡ್‌ನಿಂದ ತಲೆಗೆ ಹೊಡೆದಿದ್ದಾರೆ. ಜಗಳ ಬಿಡಿಸಲು ಬಂದ ಅವಿನಾಶ್ ಅವರ ಹೆಂಡತಿಯನ್ನು ತಳ್ಳಿ ಗಾಯಗೊಳಿಸಿದ್ದಾರೆ. ಗಾಯಾಳು ವ್ಯಕ್ತಿಗೆ ಹಿಮ್ಸ್‌ನಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮನೆ ಮುಂದೆ ನಿಲ್ಲಿಸಿದ್ದ ಕಾರು ಕಳವು

ಬೇಲೂರು: ಮನೆ ಬೀಗ ತೆಗೆದು ಒಳಗಿಟ್ಟಿದ್ದ ಕೀ ನೆರವಿನಿಂದ ಕಾರು ಕಳವು ಮಾಡಿರುವ ಘಟನೆ ತಾಲ್ಲೂಕಿನ ಗೆಂಡೆಹಳ್ಳಿ ಗ್ರಾಮದಲ್ಲಿ ನಡೆದಿದೆ.

ಅಬ್ಬಲ್ ಪಾಷ ಅವರು ಅ.5 ರಂದು ಮನೆಗೆ ಬೀಗ ಹಾಕಿ ಕೀಯನ್ನು ಎಂದಿನಂತೆ ಹೊರಗೆ ಬಿಟ್ಟಿದ್ದ ಶೂ ಒಳಗಿಟ್ಟು ಸಂಸಾರ ಸಮೇತ ಪ್ರವಾಸಕ್ಕೆ ತೆರಳಿದ್ದರು. ಅ.7ರ ಬೆಳಿಗ್ಗೆ 4 ಗಂಟೆಗೆ ಮನೆಗೆ ಬಂದು ನೋಡಿದಾಗ ಕಾರು ಇಲ್ಲದಿರುವುದು ಗೊತ್ತಾಗಿದೆ. ಬಾಗಿಲ ಕೀ ತೆಗೆದು ಒಳಹೊಕ್ಕು ನೋಡಿದಾಗ ಕಾರು ಕೀ ನಾಪತ್ತೆಯಾಗಿರುವುದು ಗೊತ್ತಾಗಿದೆ. ಮನೆಯ ಬೀಗದ ಕೀ ಇಟ್ಟಿರುವುದನ್ನು ಗಮನಿಸಿದ್ದ ಕಳ್ಳರು ಉಪಾಯದಿಂದ ಕೃತ್ಯ ಎಸಗಿದ್ದಾರೆ.

# ನವೆಂಬರ್‌ಗೆ ಜಿಲ್ಲೆಯಲ್ಲಿ ಸಿಐಟಿಯು ರಾಜ್ಯ ಸಮ್ಮೇಳನ

• ಪ್ರಜೋದಯ ವರದಿ

**ಹಾಸನ:** ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) 16ನೇ ರಾಜ್ಯ ಸಮ್ಮೇಳನ ನ.13, 14 ಮತ್ತು 15 ರಂದು ನಗರದ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆಯಲಿದೆ ಎಂದು ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಅವರು ತಿಳಿಸಿದರು.





ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿಂಗಳಿಗೆ 36 ಸಾವಿರ ರೂ. ಕನಿಷ್ಠ ವೇತನ, 10 ಸಾವಿರ ರೂ. ಪಿಂಚಣಿ, ಉದ್ಯೋಗ ಹಾಗು ಸಾಮಾಜಿಕ ಭದ್ರತೆಗಾಗಿ ಒತ್ತಾಯಿಸಿ, ಕರಾಳ ಕಾರ್ಮಿಕ ಸಂಹಿತೆಗಳನ್ನು ವಿರೋಧಿಸಿ ಸಮೃದ್ಧ ಹಾಗು ಸೌಹಾರ್ದ ಕರ್ನಾಟಕದ ನಿರ್ಮಾಣದ ಆಶಯದೊಂದಿಗೆ ಸಿಐಟಿಯು 16ನೇ ರಾಜ್ಯ ಸಮ್ಮೇಳನ ನಡೆಯುತ್ತಿದೆ ಎಂದು ತಿಳಿಸಿದರು.

ಈ ಹಿನ್ನಲೆ 16ನೇ ಸಿಐಟಿಯು ಕರ್ನಾಟಕ ರಾಜ್ಯ ಸಮ್ಮೇಳನವು ಅತ್ಯಂತ ಮಹತ್ವದ್ದಾಗಿದೆ. ಸಮ್ಮೇಳನಕ್ಕೆ ಕರ್ನಾಟಕ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿರುವ ಸಿಐಟಿಯುಗೆ ಸಂಯೋಜನೆ ಗೊಂಡಿರುವ ಕಾರ್ಮಿಕ ಸಂಘಗಳಿಂದ ಸುಮಾರು 450 ಪ್ರತಿನಿಧಿಗಳು ಮತ್ತು ಸೌಹಾರ್ದ ಪ್ರತಿನಿಧಿಗಳು ಭಾಗವಹಿಸುತ್ತಾರೆ. ಈ ಸಮ್ಮೇಳನದಲ್ಲಿ ದುಡಿಯುವ ಜನರು ಮತ್ತು ಜನ ಸಾಮಾನ್ಯರ ಪ್ರಜಾಸತ್ತಾತ್ಮಕ ಹಕ್ಕುಗಳ ರಕ್ಷಣೆಗಾಗಿ ಮುಂದೆ ಮಾಡಬೇಕಾದ ಹೋರಾಟಗಳ ಕುರಿತು ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಿಐಟಿಯು ಭಾರತದ ಒಂದು ಪ್ರಮುಖ ಕೇಂದ್ರ ಕಾರ್ಮಿಕ ಚಳುವಳಿಯಾಗಿದ್ದು ದೇಶದ ಎಲ್ಲಾ ರಾಜ್ಯಗಳಲ್ಲಿ ತನ್ನ ಘಟಕಗಳನ್ನು ಹೊಂದಿದೆ. ಎಲ್ಲಾ ಜಿಲ್ಲೆಗಳಲ್ಲಿ ಸಕ್ರಿಯವಾಗಿ ದುಡಿಯುವ ಜನರಾದ ಕಾರ್ಮಿಕರು, ರೈತರು, ಕೂಲಿಕಾರರು ಮತ್ತು ದಲಿತರ ಹಕ್ಕುಗಳಿಗಾಗಿ ಹೋರಾಟ ನಡೆಸುತ್ತಿದೆ. ಜಿಲ್ಲೆಯ 8 ತಾಲ್ಲೂಕುಗಳಲ್ಲಿ ಸಿಐಟಿಯು ಸಮಿತಿಗಳಿದ್ದು, ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಹಕ್ಕುಗಳಿಗಾಗಿ ನಿರಂತರವಾಗಿ ಕೆಲಸ ಮಾಡುತ್ತಿದೆಂದು ತಿಳಿಸಿದರು.

ಸ್ವಾಗತ ಸಮಿತಿ ಗೌರವಾಧ್ಯಕ್ಷ ಹೆಚ್.ಎನ್.ಪರಮಶಿವಯ್ಯ, ಕಾರ್ಮಿಕ ಮುಖಂಡರಾದ ಎಂ.ಬಿ.ಪುಷ್ಪ, ಜಿ.ಪಿ.ಸತ್ಯನಾರಾಯಣ, ಅರವಿಂದ್ ಇದ್ದರು.

# ಸಿಜೆಐ ಮೇಲೆ ಶೂ ಎಸೆದ ಆರೋಪಿ ಬಂಧನಕ್ಕೆ ಒತ್ತಾಯ

• ಪ್ರಜೋದಯ ವರದಿ

**ಹಾಸನ:** ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ಶೂ ಎಸೆದಿರುವ ಆರೋಪಿಯನ್ನು ಕೂಡಲೇ ಬಂಧಿಸಿ, ಕಠಿಣ ಶಿಕ್ಷೆಗೆ ಗುರಿಪಡಿಸುವಂತೆ ಆಗ್ರಹಿಸಿ ದಲಿತ ಸಂಘಟನೆ ಸಮನ್ವಯ ಸಮಿತಿಯಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರಿನ ಅಂಬೇಡ್ಕರ್ ಪ್ರತಿಮೆ ಎದುರು ಜಮಾಯಿಸಿದ ನೂರಾರು ಪ್ರತಿಭಟನಾಕಾರರು, ಆರೋಪಿ ವಕೀಲ ಕಿಶೋರ ರಾಕೇಶ್ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರ ಹಾಕಿದರು.

ಈ ವೇಳೆ ಮಾತನಾಡಿದ ಆರ್‌ಪಿಐ ರಾಜ್ಯಾಧ್ಯಕ್ಷ ಸತೀಶ್, ಬಿ.ಆರ್.ಗವಾಯಿ ಅವರು ಧಮ್ಮ ಮಾರ್ಗದಲ್ಲಿ ನಡೆಯುತ್ತಿರುವ ಡಾ.ಅಂಬೇಡ್ಕರ್ ಅವರ ಅನುಯಾಯಿಯಾಗಿದ್ದು, ಅದನ್ನು ಮನುವಾದಿ ಮನಸ್ಥಿತಿಯ ಜಾತಿವಾದಿಗಳಿಗೆ ಅರಗಿಸಿಕೊಳ್ಳಲು ಆಗದೆ ಅವರ ಮೇಲೆ ಶೂ ಎಸೆದಿದ್ದಾರೆಂದು ಕಿಡಿಕಾರಿದರು.

ವಕೀಲ ಕಿಶೋರ್ ರಾಕೇಶ್ ಶೂ ಎಸೆದಿರುವುದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಮೇಲೆ ಮಾತ್ರವಲ್ಲ, ಈ ಮೂಲಕ ಪರಮೋಚ್ಚ ದೇಶದ ಸಂವಿಧಾನ, ಪ್ರಜಾಪ್ರಭುತ್ವಕ್ಕೆ ಅವಮಾನ ಮಾಡಿದ್ದಾರೆ. ನ್ಯಾಯಮೂರ್ತಿ ಮೇಲೆ ಶೂ ಎಸೆಯಲು ದೇವರೇ ನನಗೆ ಪ್ರೇರಣೆ ನೀಡಿತು ಎಂದು ಆರೋಪಿ ಹೇಳಿದ್ದಾನೆ. ಅಂತಹ ದೇವರಿಗೂ ನಮ್ಮ ಧಿಕ್ಕಾರವಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ಆರೋಪಿ ವಿರುದ್ಧ ಸುಮೊಟೋ ಪ್ರಕರಣ ದಾಖಲಿಸಿ ಬಂಧಿಸಬೇಕು. ಇಲ್ಲದಿದ್ದರೆ ದಲಿತಪರ ಸಂಘಟನೆಗಳ ವತಿಯಿಂದ ದೇಶಾದ್ಯಂತ ಹೋರಾಟ ನಡೆಸಲಾಗುತ್ತದೆಂದು ಎಚ್ಚರಿಸಿದರು.



ಹಿರಿಯ ದಲಿತ ಮುಖಂಡರಾದ ಕೃಷ್ಣದಾಸ್, ಅಂಬುಗ ಮಲ್ಲೇಶ್, ಸೋಮಶೇಖರ್, ವೀರೇಶ್, ಮಲ್ಲಿಗೆವಾಳು ದ್ಯಾವಪ್ಪ, ಶಿವಮ್ಮ ಮೊದಲಾದವರಿದ್ದರು.

# ಗಣತಿದಾರರಿಂದ ಲೋಪ: ತಿದ್ದುಪಡಿಗೆ ಆಗ್ರಹ



• ಪ್ರಜೋದಯ ವರದಿ

**ಹಾಸನ:** ಜಾತಿಗಣತಿ ವೇಳೆ ಲೋಪ ಎಸಗಿರುವ ಶಿಕ್ಷಕರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಹಾಗು ತಪ್ಪನ್ನು ಸರಿಪಡಿಸಿ ಮೂಲಜಾತಿಯನ್ನು ಮರು ನಮೂದಿಸಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಹೊಳೆನರಸೀಪುರದ ಮಹದೇಶ್ವರ ಕಾಲೋನಿ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಈ ವೇಳೆ ಹಿಮ್ಸ್ ಆಡಳಿತ ಪರಿಷತ್ ಸದಸ್ಯ ರವೀಶ್ ಬಸವಾಪುರ ಮಾತನಾಡಿ, ಹೊಳೆನರಸೀಪುರ ತಾಲ್ಲೂಕಿನ ಹಳ್ಳಿ ಮೈಸೂರು ಹೋಬಳಿ ತೇಜೂರು ಮಹದೇಶ್ವರ ಕಾಲೋನಿ ಗ್ರಾಮದಲ್ಲಿ ಸುಮಾರು 135 ಮಾದಿಗ ಸಮುದಾಯದ ಕುಟುಂಬಗಳು ವಾಸಿಸುತ್ತಿದ್ದು, ಈ ಗ್ರಾಮಕ್ಕೆ ಸಮೀಕ್ಷೆ ಮಾಡಲು ಬಂದಿದ್ದ ಗಣತಿದಾರರಾದ ಶುಭ ಮತ್ತು ಲಲಿತ ಅವರು ಮನಸೋ ಇಚ್ಛೆ ಬರೆದುಕೊಂಡು ಹೋಗುತ್ತಿದ್ದಾರೆಂದು ಆರೋಪಿಸಿದರು.

ಸರ್ಕಾರ ನಡೆಸುತ್ತಿರುವ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೆಲಸದಲ್ಲಿ ನಿರತರಾಗಿರುವ ಶಿಕ್ಷಕರು ಜಾತಿ ಕಾಲಂನಲ್ಲಿ ತಮಗೆ ಇಷ್ಟ ಬಂದ ಜಾತಿಯ ಹೆಸರನ್ನು ನಮೂದಿಸಿ ಲೋಪವೆಸಗಿದ್ದಾರೆ.

ಗಣತಿ ಮಾಡುವ ವೇಳೆ ಗ್ರಾಮಸ್ಥರು ಗಣತಿಯ ಜಾತಿ ಕಾಲಂನಲ್ಲಿ 061 ಅದರಲ್ಲಿ ಮಾದಿಗ ಎಂದು ನಮೂದಿಸುವಂತೆ ಕೇಳಿಕೊಂಡರೂ ಶಿಕ್ಷಕಿಯರಾದ ಶುಭಾ ಮತ್ತು ಲಲಿತಾ ಎಂಬುವವರು ಗಣತಿಯ ಜಾತಿ ಕಾಲಂನಲ್ಲಿ 061ರಲ್ಲಿ ಮಾದಿಗ ಎಂದು ಬರೆದಿರುವುದಿಲ್ಲ. ಕೇಳಿದರೆ ನಾವು ಹಾಗೆ ಮಾಡಲಿಕ್ಕೆ ಬರಲ್ಲ. ನಮಗೆ ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಎಂದು ಮಾತ್ರ ನಮೂದಿಸಲು ಸರ್ಕಾರದ ನಿರ್ದೇಶನವಿದೆ ಎಂದು ಉತ್ತರ ನೀಡಿದ್ದಾರೆ. ಶೋಷಿತ ಸಮುದಾಯಗಳಲ್ಲೊಂದಾದ ಮಾದಿಗ ಸಮುದಾಯದ ಗಣತಿಯಲ್ಲಿ ಸರ್ಕಾರದ ಗಣತಿ ನಿಯಮ ಉಲ್ಲಂಘಿಸಿ ಸಾರ್ವಜನಿಕರೊಡನೆ ಉಡಾಫೆಯಿಂದ ಅನುಚಿತವಾಗಿ ವರ್ತಿಸಿದ್ದಾರೆ. ಗಣತಿದಾರ ಶಿಕ್ಷಕಿಯರನ್ನು ಅಮಾನತು ಮಾಡುವಂತೆ ಹಾಗೂ ಸಮೀಕ್ಷೆಯಲ್ಲಿ ಆಗಿರುವ ಲೋಪವನ್ನು ಸರಿಪಡಿಸುವಂತೆ ಸರ್ಕಾರವನ್ನು ಆಗಹಿಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಧಿಕಾರಿಗಳಿಗೆ ಈ ವಿಚಾರದ ತಿಳಿಸಲಾಗಿದ್ದು, ಆ ಇಬ್ಬರು ಶಿಕ್ಷಕಿಯರಿಗೆ ನೋಟೀಸ್ ಜಾರಿ ಮಾಡಿರುವುದಾಗಿ ತಿಳಿಸಿದರು.

ಐಎನ್‌ಟಿಯುಸಿ ಜಿಲ್ಲಾ ಸಮಿತಿ ಜಿಲ್ಲಾಧ್ಯಕ್ಷ ರಾಮಚಂದ್ರ, ಕಬ್ಬಳಿ, ಲೋಕೇಶ್ ಕ್ಯಾತನಹಳ್ಳಿ, ರಂಗಸ್ವಾಮಿ, ನಿವಾಸಿಗಳು ಇದ್ದರು.





ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019